ಸಂಪುಟ : 9 ಸಂಚಿಕೆ 192 ಪುಟ : 4 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 6 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 192 Pages : 4 Price : 3.00 Friday september 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಸೆಪ್ಟೆಂಬರ್ 6 ರಿಂದ 8 ರವರೆಗೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು ವಿವರ ಕೆಳಗಿನಂತಿದೆ.

ಸೆಪ್ಟೆಂಬರ್ 6 ರಂದು ಬೆಳಿಗ್ಗೆ 10 ಗಂಟೆಗೆ ನಗರದ ದಿ.ಗದಗ ಕೋ ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಹೆಸರು ಬೆಂಬಲ ಬೆಲೆಯ ಖರೀದಿ ಕೇಂದ್ರ ಪ್ರಾರಂಭಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆ.11ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 12 ಗಂಟೆಗೆ ವಿಕಲಚೇತನರ ಕಲ್ಯಾಣ ಇಲಾಖೆಯವರೊಂದಿಗೆ ಸಭೆ ಜರುಗಿಸುವರು. ಸಂಜೆ 6 ಗಂಟೆಗೆ ನಗರದ ದಿ. ಗದಗ ಕೋ ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಶಾಸಕರ ಕಚೇರಿಯಲ್ಲಿ ಸಭೆ ಜರುಗಿಸುವರು ಮತ್ತು ವಾಸ್ತವ್ಯ ಮಾಡುವರು.

ಸೆಪ್ಟೆಂಬರ್ 7ರಂದು ಮಧ್ಯಾಹ್ನ 12 ಗಂಟೆಗೆ ಹುಲಕೋಟಿಯ ವಿವೇಕಾನಂದ ವಿಜ್ಞಾನ ಕಾಲೇಜಿನ ಆಡಿಟೋರಿಯಂ ಹಾಲ್‌ನಲ್ಲಿ ಶತಮಾನೋತ್ಸವ ಕಾರ್ಯಕ್ರಮದ ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳುವರು. ನಂತರ ಗಣೇಶ ಚತುರ್ಥಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಾಸ್ತವ್ಯ ಮಾಡುವರು.

ಸೆಪ್ಟೆಂಬರ್ 8 ರಂದು ಬೆ 9.30 ಗಂಟೆಗೆ ಲಕ್ಕುಂಡಿ ಪಾರಂಪರಿಕ ಪ್ರದೇಶ ಪ್ರಾಧಿಕಾರದ 13 ಆರಕ್ಷಿತ ಸ್ಮಾರಕಗಳ ಸಂರಕ್ಷಣಾ ಮತ್ತು ಅಭಿವೃದ್ಧಿ ಕಾಮಗಾರಿಗಳ ಶಿಲಾನ್ಯಾಸ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12.30 ಗಂಟೆಗೆ ಅಣ್ಣಿಗೇರಿ ತಾಲೂಕಿನ ಮಣಕವಾಡಕ್ಕೆ ತೆರಳಿ ಅಲ್ಲಿಂದ ಹುಬ್ಬಳ್ಳಿ ಮೂಲಕ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರು

# ಶಿಕ್ಷಕರು ಗಂಭೀರತೆಯಿಂದ ಕಾರ್ಯ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಶಿಕ್ಷಕರನ್ನು ಸಾಕ್ಷಾತ್ ಬ್ರಹ್ಮನಂತೆ ಕಾಣುತ್ತಾರೆ. ಅದಕ್ಕೆ ಗೌರವ ತರುವಂತೆ ಎಲ್ಲ ಶಿಕ್ಷಕವೃಂದ ಶಿಕ್ಷಣ ನೀಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಹೇಳಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಗದಗ ಗ್ರಾಮೀಣ ಮತ್ತು ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರುಗಳ ಸಹಯೋಗದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗದಗ ಜಿಲ್ಲೆ ಸೇರಿದಂತೆ ದೇಶಾದ್ಯಂತ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮದಿನಾಚರಣೆ ಅಂಗವಾಗಿ ಶಿಕ್ಷಕರ ದಿನಾಚರಣೆ ಆಚರಿಸಲಾಗುತ್ತಿದೆ. ಶಿಕ್ಷಕರ ದಿನಾಚರಣೆಗೆ ಕಾರಣೀಕರ್ತರಾದ ರಾಧಾಕೃಷ್ಣನ್ ಅವರು ತಮ್ಮ ಹುಟ್ಟುಹಬ್ಬದ ದಿನವನ್ನು ಶಿಕ್ಷಕರ ದಿನಾಚರಣೆ ಎಂದು ಆಚರಿಸಲು ತಿಳಿಸಿದರು. ರಾಧಕೃಷ್ಣನ್ ಅವರು ಪ್ರಾಧ್ಯಾಪಕರಾಗಿ ವೃತ್ತಿ ಆರಂಭಿಸಿ ತಮ್ಮ ಜೀವನವನ್ನು ಮಕ್ಕಳಿಗಾಗಿ ಸಮರ್ಪಿಸಿಕೊಂಡರು. ರಾಧಾಕೃಷ್ಣನ್ ಅವರಿಗೆ ವಿವಿಧ ದೇಶಗಳು ಡಾ-ಕ್ಟರೇಟ್ ನೀಡಿ ಗೌರವವನ್ನು ಸಲ್ಲಿಸಿವೆ. ಅವರ ಆದರ್ಶ ಜೀವನ ಶೈಲಿಯನ್ನು ಇಂದಿನ ಶಿಕ್ಷಕರು ಅಳವಡಿಸಿಕೊಂಡು ಶಿಕ್ಷಕರು ತಮ್ಮ ವೃತ್ತಿಯಲ್ಲಿ ಸಾಧನೆ ಮಾಡಬೇಕು ಎಂದರು.



ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಲ್. ಬಾರಟಕ್ಕೆ, ಸರ್ವರನ್ನು ಸ್ವಾಗತಿಸಿ ಮಾತನಾಡಿ, ಶಿಕ್ಷಕರು ಪ್ರಾರಂಭದಿಂದ ನಿವೃತ್ತಿವರೆಗೆ ಸದಾ ಕ್ರಿಯಾಶೀಲಾರಾಗಿ ಕೆಲಸ ಮಾಡಬೇಕು. ಮಗುವಿಗೆ ತಾಯಿಯ ಉಸಿರು ಮತ್ತು ತಂದೆಯಿಂದ ಹೆಸರು ಬರುತ್ತದೆ. ಶಿಕ್ಷಕರು ಮಗುವಿನ ಹೆಸರು-ಉಸಿರು ಶಾಶ್ವತವಾಗಿ ಇರುವಂತೆ ಮಾಡಿ ವಿದ್ಯಾರ್ಥಿಯ ಭವಿಷ್ಯ ನಿರ್ಮಿಸುವ ಶಿಲ್ಪಿಯಾಗಬೇಕು ಎಂದು ಹೇಳಿದರು.

ಉಪನ್ಯಾಸಕರಾಗಿ ಐ.ಬಿ. ಬೆನಕೊಪ್ಪ ಮಾತನಾಡಿ, ಶಿಕ್ಷಕರ ಬೇಡಿಕೆ, ಜವಾಬ್ದಾರಿ, ಸವಾಲುಗಳ ಕುರಿತು ಶಿಕ್ಷಕರ ದಿನಾಚರಣೆಯಲ್ಲಿ ಚರ್ಚೆ ಮಾಡಬೇಕು. ಸಾಕಷ್ಟು ಕತ್ತಲು ಆವರಿಸಿದ ಮನಸ್ಸಿನ್ನು ಬೆಳಕಿನೆಡೆಗೆ ಸಾಗಿಸಲು ಶಿಕ್ಷಕರು ಬೇಕು. ಹಾಗಾಗಿ ಶಿಕ್ಷಕರು ಹೃದಯ ಶ್ರೀಮಂತಿಕೆ ಹೊಂದಬೇಕು. ಮಾನಸಿಕ ಹಾಗೂ ಶಾರೀರಿಕವಾಗಿ ಸದೃಢತೆ ಹಾಗೂ ನೈತಿಕತೆ ಹೊಂದಿರಬೇಕು ಎಂದು ಶಿಕ್ಷಕ ವೃತ್ತಿಯ ಕುರಿತು ಉಪನ್ಯಾಸ ನೀಡಿದರು.


> ದೇಶದ ಭವಿಷ್ಯ ನಾಲ್ಕು ಗೋಡೆಗಳ ಮಧ್ಯೆ ನಿರ್ಮಾಣವಾಗುತ್ತದೆ. ಅದರಲ್ಲಿ ಕೆಲಸ ಮಾಡುವ ಶಿಕ್ಷಕರ ಜವಾಬ್ದಾರಿ ಗುರುತರವಾದದ್ದು. ಒಬ್ಬ ತಾಯಿ ಮಗುವಿಗೆ ಜನ್ಮ ನೀಡಿದರೆ ಆ ಮಗುವಿನ ಭವಿಷ್ಯದ ನಿರ್ಮಾಣ ಮಾಡುವವರು ಶಿಕ್ಷಕರು ಎಂದು ತಿಳಿದುಕೊಂಡು ಎಲ್ಲರೂ ಗಂಭೀರತೆಯಿಂದ ಕಾರ್ಯನಿರ್ವಹಿಸಬೇಕು.
>
> – ಎಸ್.ವಿ. ಸಂಕನೂರು.
> ವಿ.ಪ ಸದಸ್ಯರು.

> ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಮಾತನಾಡಿ, ನಾನು ಕೂಡ ಶಿಕ್ಷಕ ವೃತ್ತಿಯಿಂದ ಬಂದಿರುವುದು ನನಗೆ ಹೆಮ್ಮೆಯ ವಿಷಯವಾಗಿದೆ. ಶಿಕ್ಷಕರು ಕೇವಲ ಶಾಲೆಗೆ ಸೀಮಿತವಾಗದೆ ತುರ್ತು ಪರಿಸ್ಥಿತಿಯಂತಹ ಕೋವಿಡ್ ವೇಳೆ, ಚುನಾವಣೆ ಸಂದರ್ಭದಲ್ಲಿ ಎಲ್ಲರೂ ಸಮರ್ಥವಾಗಿ ಕಾರ್ಯನಿರ್ವಹಿಸಿದಕ್ಕೆ ಅಭಿನಂದನೆಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮ ನೆರವೇರಿತು. ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ನೌಕರರ ಸಂಘದ ಅಧ್ಯಕ್ಷ ರವಿ ಗುಂಜಿಕರ, ಅಕ್ಷರ ದಾಸೋಹ ಅಧಿಕಾರಿ ಸರಸ್ವತಿ, ಎಸ್.ಎನ್. ಬಳ್ಳಾರಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ಎಸ್.ಬುರಡಿ, ವಿ.ವಿ. ನಡುವಿನಮನಿ, ಶಾಲಾ ಶಿಕ್ಷಕರು, ವಿವಿಧ ಸಂಘಟನೆಗಳ ಪ್ರತಿನಿಧಿಗಳು ಹಾಜರಿದ್ದರು.

ಕಾರ್ಯಕ್ರಮವನ್ನು ವಿರೇಶ ವಾಲ್ಮಿಕಿ, ಬಿ.ಎಂ. ಎರಗುಡಿ ನಿರೂಪಿಸಿದರು.

## ಕುಸ್ತಿ ಪಂದ್ಯಾವಳಿಗೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ನೇಪಾಳದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಕುಸ್ತಿ ಪಂದ್ಯಾವಳಿಗೆ ಇಲ್ಲಿಯ ಗ್ರಾಮ ಪಂಚಾಯಿತಿ ಸದಸ್ಯ, ರಾಜ್ಯ ಮಟ್ಟದ ಕುಸ್ತಿ ಪಟು ರಮೇಶ ಭಾವಿ ಆಯ್ಕೆಯಾಗಿದ್ದಾರೆ. ಭಾರತದಿಂದ ಪ್ರತಿನಿಧಿಸಿರುವ ರಮೇಶ ಅವರು ಈಗಾಗಲೇ ನೇಪಾಳದಲ್ಲಿ ಅಂತಾರಾಷ್ಟ್ರೀಯ ಯೂಥ್ ಕ್ರೀಡಾಕೂಟದ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಿದ್ದಾರೆ.

ಅಂತಾರಾಷ್ಟ್ರೀಯ ಯುವ ಕ್ರೀಡೆ ಮತ್ತು ಶಿಕ್ಷಣ ಸಂಸ್ಥೆ ಮತ್ತು ಯುಥ್ ಸ್ಪೋರ್ಟ್ಸ್ ಡೆವಲಪ್‌ಮೆಂಟ್ ಫೋರಮ್ ನೇಪಾಳ ಇವರ ಆಶ್ರಯದಲ್ಲಿ ಈ ಕುಸ್ತಿ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಮತ್ತು ಸರ್ವ ಸದಸ್ಯರು, ಲಕ್ಕುಂಡಿ ಕುಸ್ತಿ ಪೈಲವಾನರ ಸಂಘ ಅಭಿನಂದಿಸಿದೆ.

### ಶಿರಹಟ್ಟಿ, ಲಕ್ಷ್ಮೇಶ್ವರ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ದಿಂಗಾಲೇಶ್ವರ ಶ್ರೀ

# ವೃತ್ತಿ ಧರ್ಮಕ್ಕೆ ದ್ರೋಹ ಮಾಡದಿರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ದೇಶದ ಭವಿಷ್ಯವನ್ನು ಬದಲಿಸುವ ಶಕ್ತಿ ಶಿಕ್ಷಕರಲ್ಲಿ ಮಾತ್ರ ಇದೆ. ಸಮಾಜದ ನಿರೀಕ್ಷೆಯಂತೆ ಶಾಲೆಯ ಒಳಗೂ ಹಾಗೂ ಹೊರಗೂ ನೈತಿಕ ಪ್ರಜ್ಞೆಯಿಂದ ವ್ಯವಹರಿಸಬೇಕು. ಶಿಕ್ಷಕರಾದವರು ಉತ್ತಮ ಸಮಾಜದ ನಿರ್ಮಾತೃಗಳಾಗಿದ್ದು, ಅಪೇಕ್ಷಿತ ಮೌಲ್ಯದಂತೆ ವಿದ್ಯಾದಾನದ ವೃತಧಾರಕರಾಗಿರಬೇಕು ಎಂದು ಶಿರಹಟ್ಟಿ ಸಂಸ್ಥಾನಮಠದ ಉತ್ತರಾಧಿಕಾರಿಗಳಾದ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ನುಡಿದರು.

ಅವರು ಗುರುವಾರ ಪಟ್ಟಣದ ಶ್ರೀ ರಂಭಾಪುರಿ ವೀರಗಂಗಾಧರ ಕಲ್ಯಾಣಮಂಟಪದಲ್ಲಿ ಜಿ.ಪಂ ಗದಗ, ತಾಲೂಕಾಡಳಿತ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 136ನೇ ಜನ್ಮದಿನಾಚರಣೆ ಪ್ರಯುಕ್ತ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ, ನಿವೃತ್ತ ಶಿಕ್ಷಕರ ಸನ್ಮಾನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಆತ್ಮಸಾಕ್ಷಿಯಿಂದ ಯಾವ ಶಿಕ್ಷಕ ಸೇವೆ ಸಲ್ಲಿಸುತ್ತಾನೆಯೋ ಅವರೇ ನಿಜವಾದ ಶಿಕ್ಷಕರು, ಬ್ರಹ್ಮ ಬಿಟ್ಟಿರುವ ಪದಗಳನ್ನು ತುಂಬುವ ಶಕ್ತಿ ಇರುವದು ಶಿಕ್ಷಕರಲ್ಲಿ ಮಾತ್ರ. ನಿಮ್ಮ ಕೈಯಲ್ಲಿ ಕಲಿತ ವಿದ್ಯಾರ್ಥಿ ತಂದೆ-ತಾಯಿಯನ್ನು ಮರೆತರೂ ಸಹ ಕಲಿಸಿದ ಶಿಕ್ಷಕರನ್ನು ಮರೆಯುವಂತಿರಬಾರದು ಎಂದು ನುಡಿದ ಶ್ರೀಗಳು, ವೃತ್ತಿ ಧರ್ಮಕ್ಕೆ ದ್ರೋಹ ಮಾಡದೆ ಮಕ್ಕಳ ಭವಿಷ್ಯ ರೂಪಿಸುವ ಮಹಾನ್ ಕಾಯಕವನ್ನು ಮಾಡುವಂತೆ ಸಲಹೆ ನೀಡಿದರು.



ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಸಮಾಜದಲ್ಲಿ ಶಿಕ್ಷಕ ವೃತ್ತಿಗೆ ಬಹು ಗೌರವ ಸ್ಥಾನವನ್ನು ನೀಡಲಾಗುತ್ತಿದ್ದು, ಶಿಕ್ಷಕ ವೃತ್ತಿಯಲ್ಲಿ ಸೇವೆ ಮಾಡುವವರು ವೃತ್ತಿ ಧರ್ಮವನ್ನು ಕಾಪಾಡಿಕೊಂಡು ಹೋಗುವದರ ಜೊತೆಗೆ ವಿದ್ಯಾರ್ಥಿಗಳ ಸಮಗ್ರ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕು. ದೇಶದ ಭವಿಷ್ಯಕ್ಕಾಗಿ ಸಮರ್ಥ ವಿದ್ಯಾರ್ಥಿಗಳನ್ನು ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕ ವೃತ್ತಿ ಉದಾತ್ತ ಮಾನವೀಯ ಮೌಲ್ಯಗಳಿಂದ ಕೂಡಿದ್ದು, ವಿದ್ಯಾರ್ಥಿಗಳನ್ನು ತನ್ನ ಸ್ವಂತ ಮಕ್ಕಳಂತೆ ಪ್ರೀತಿಸುವ ನೈತಿಕತೆ ಅಗತ್ಯವಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್ ಪ್ರಾಸ್ತಾವಿಕ ಮಾತನಾಡಿದರು. ಲಕ್ಷ್ಮೇಶ್ವರ ತಹಸೀಲ್ದಾರ ವಾಸುದೇವ ಸ್ವಾಮಿ, ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ಲಕ್ಷ್ಮೇಶ್ವರ ಇಓ ಕೃಷ್ಣಪ್ಪ ಧರ್ಮರ, ಶಿರಹಟ್ಟಿ ಇಓ ಎಸ್.ಎಸ್. ಕಲ್ಮನಿ, ಪ.ಪಂ ಮುಖ್ಯಾಧಿಕಾರಿ

> ಶಿಕ್ಷಕರಾದವರು ತಮ್ಮ ವೈಯಕ್ತಿಕ ಜೀವನದಲ್ಲಿ ಒಳ್ಳೆಯ ಚಾರಿತ್ರ್ಯವನ್ನು ಬೆಳೆಸಿಕೊಳ್ಳಬೇಕು. ಸಮಾಜ ಅಪೇಕ್ಷಿಸುವ ರೀತಿಯಲ್ಲಿ ನೈತಿಕ ನೆಲೆಗಟ್ಟಿನ ಮೇಲೆ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು. ತಾಲೂಕಿನ ಬಹುತೇಕ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವ ಬಗ್ಗೆ ಗಮನಕ್ಕೆ ಬಂದಿದೆ. ಶಾಸಕರ ಅನುದಾನದಲ್ಲಿ ಆದ್ಯತೆಯ ಮೇರೆಗೆ ಸೌಲಭ್ಯ ಒದಗಿಸುವದಾಗಿ ಶಾಸಕ ಡಾ.

ಸಿದ್ದರಾಯ ಕಟ್ಟಿಮನಿ, ಮುಖ್ಯಾಧಿಕಾರಿ ಮಹೇಶ ಹಡಪದ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಸದಸ್ಯರಾದ ಪ್ರವೀಣ ಬಾಳಿಕಾಯಿ, ಮಹಾದೇವಪ್ಪ ಅಣ್ಣಿಗೇರಿ, ಅಕ್ಷರ ದಾಸೋಹ ನಿರ್ದೇಶಕ ರಾಮನಗೌಡ್ರ, ಮಂಜುನಾಥ ಕೊಕ್ಕರಗುಂದಿ, ಡಿ.ಎಚ್. ಪಾಟೀಲ, ಬಿ.ಎಸ್. ಹರ್ಲಾಪೂರ, ಹಾಗೂ ಶಿರಹಟ್ಟಿ, ಲಕ್ಷ್ಮೇಶ್ವರ ತಾಲೂಕುಗಳ ಶಿಕ್ಷಕರು ಹಾಜರಿದ್ದರು. ಈಶ್ವರ ಮೇಡ್ಲೇರಿ, ಸತೀಶ ಬೋಮಲೆ, ಎಚ್.ಡಿ. ನಿಂಗರಡ್ಡಿ ನಿರೂಪಿಸಿದರು.

### ಪತ್ರಿಕಾಗೋಷ್ಠಿಯಲ್ಲಿ ಹಸಿರು ಸೇನೆ ರಾಜ್ಯಾಧ್ಯಕ್ಷ ಚನ್ನಪ್ಪ ಪೂಜಾರಿ ಆರೋಪ

## ಸರ್ಕಾರಗಳು ರೈತರ ಹಿತ ಕಾಪಾಡುತ್ತಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ರೈತರ ಬಗ್ಗೆ ಕಾಳಜಿ ಇರುವ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸಂದರ್ಭದಲ್ಲಿ ರೈತರ ಕಲ್ಯಾಣದ ನಿರೀಕ್ಷೆ ಇತ್ತು. ರೈತರ 2 ಲಕ್ಷ ರೂ.ವರೆಗಿನ ಸಾಲ ಮನ್ನಾ ಮಾಡುವುದಾಗಿ ಹೇಳಿ ಸಿದ್ದರಾಮಯ್ಯ ಮಾತು ತಪ್ಪಿದ್ದಾರೆ. ಹಾಗೆಯೇ ನರೇಂದ್ರ ಮೋದಿ 3ನೇ ಬಾರಿ ಪ್ರಧಾನಿಯಾದರೂ ಸ್ವಾಮಿನಾಥನ್ ವರದಿ ಜಾರಿಗೊಳಿಸಿಲ್ಲ ಎಂದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ಚನ್ನಪ್ಪ ಪೂಜಾರಿ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಸಂಕಷ್ಟಕ್ಕೆ ಒಳಗಾದ ಶೇ. 75ರಷ್ಟು ರೈತರಿಗೆ ಇದುವರೆಗೂ ಪರಿಹಾರ ಸಿಕ್ಕಿಲ್ಲ. ಸರಕಾರದ ಈ ರೈತ ವಿರೋಧಿ ನೀತಿಯನ್ನು ಖಂಡಿಸಿ ಶೀಘ್ರವೇ ಜನಪ್ರತಿನಿಧಿಗಳ ಮನೆಗೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಸಿದರು.



ದಿ. ಕೆ.ಎಚ್. ಪಾಟೀಲರು ರೈತರ ಅನುಕೂಲಕ್ಕಾಗಿ ರೈತ ಭವನ ನಿರ್ಮಿಸಿದರು. ಆದರೆ ಆ ಕಟ್ಟಡದಲ್ಲಿ ಬೇರೆ ಬೇರೆ ಸರಕಾರಿ ಕಚೇರಿಗಳೇ ಹೆಚ್ಚು ಕಾರ್ಯನಿರ್ವಹಿಸಿವೆ. ರೈತರಿಗೆ ಕುಳಿತುಕೊಳ್ಳಲು ಸಣ್ಣ ಜಾಗವೂ ಇಲ್ಲ. ಇನ್ನಾದರೂ ರೈತ ಭವನ ರೈತರಿಗೆ ಮೀಸಲಾಗಲಿ ಎಂದು ಚನ್ನಪ್ಪ ಪೂಜಾರಿ ಒತ್ತಾಯಿಸಿದರು.

ಗದಗ ಜಿಲ್ಲೆಯಲ್ಲಿ ಈವರೆಗೆ ಹೆಸರುಕಾಳು ಖರೀದಿ ಕೇಂದ್ರ ಆರಂಭವಾಗಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳನ್ನು ಕೇಳಿದರೆ ತಾಂತ್ರಿಕ ಕಾರಣದ ನೆಪ ಹೇಳುತ್ತಿದ್ದಾರೆ. ಜಿಲ್ಲೆಯ ಪ್ರಮುಖ ನೀರಾವರಿ ಯೋಜನೆಯಾದ ಸಿಂಗಟಾಲೂರ ಏತ ನೀರಾವರಿ ಯೋಜನೆ ಈವರೆಗೂ ಪೂರ್ಣಗೊಂಡು ಕೊನೆ ಭಾಗದ ಹಳ್ಳಿಗಳಿಗೆ ನೀರು ಹೋಗುತ್ತಿಲ್ಲ. ಇದೆಲ್ಲವನ್ನು ಖಂಡಿಸಿ, ಎಲ್ಲ ರೈತ ಪರ ಸಂಘಟನೆಗಳನ್ನು ಒಗ್ಗೂಡಿಕೊಂಡು ಬೆಂಗಳೂರಿನಲ್ಲಿ ಜನಪ್ರತಿನಿಧಿಗಳ ಮನೆ ಮುಂದೆ ಧರಣಿ ನಡೆಸಲು ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

> ಅತಿವೃಷ್ಟಿ, ಅನಾವೃಷ್ಟಿ ನಿರ್ವಹಣೆಯಲ್ಲಿ ರಾಜ್ಯ ಸರಕಾರ ಸಂಪೂರ್ಣ ವಿಫಲವಾಗಿದೆ. ವಿರೋಧ ಪಕ್ಷಗಳು ಸಹ ರಾಜಕೀಯ ಕಾರಣಕ್ಕೆ ಪಾದಯಾತ್ರೆ ನಡೆಸುತ್ತಿವೆಯೇ ಹೊರತು ರೈತರ ಹಿತ ಕಾಪಾಡುವ ನಿಟ್ಟಿನಲ್ಲಿ ಹೋರಾಟ ಮಾಡುತ್ತಿಲ್ಲ. ರಾಜ-ಕಾರಣ ಎಂದರೆ ಅಧಿಕಾರಕ್ಕೆ ಮಾಡುವ ವ್ಯವಹಾರ ಎನ್ನುವಂತಾಗಿದೆ ಎಂದು ಚನ್ನಪ್ಪ ಪೂಜಾರಿ ಆರೋಪಿಸಿದರು.

ಈ ಸಂದರ್ಭದಲ್ಲಿ ಮಹೇಶಗೌಡ ಸುಬೇದಾರ, ಸುರೇಶ ಪರಗಣ್ಣವರ, ಕಿಶನ್ ನಂದಿ, ಶರಣಪ್ಪ ಮರಳಿ, ಚಂದನಗೌಡ ಪಾಟೀಲ, ವಿಜಯಕುಮಾರ ಸುಂಕದ, ಬಸವರಾಜ ಮಾಳಿಕಾಯಿ ಇತರರು ಉಪಸ್ಥಿತರಿದ್ದರು.

## ಬಿಜೆಪಿ ಸದಸ್ಯತಾ ಅಭಿಯಾನಕ್ಕೆ ಚಾಲನೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ ಪಕ್ಷದ ಸದಸ್ಯತಾ ಅಭಿಯಾನ ಶುಕ್ರವಾರ ಸಂಜೆ 4 ಗಂಟೆಗೆ ಹುಬ್ಬಳ್ಳಿ ರಸ್ತೆಯಲ್ಲಿರುವ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ ನೇತೃತ್ವದಲ್ಲಿ ಮಾಜಿ ಸಚಿವರು, ಹಾಲಿ ಶಾಸಕರಾದ ಸಿ.ಸಿ. ಪಾಟೀಲರಿಂದ ಚಾಲನೆಗೊಳ್ಳಲಿದೆ.




ನಗರದ ವಾರ್ಡ್ ನಂ.23ರಲ್ಲಿರುವ ಒಕ್ಕಲಗೇರಿಯ ರಾಚೋಟೇಶ್ವರ ದೇವಸ್ಥಾನದ ಹತ್ತಿರ ಸಂಜೆ 5 ಗಂಟೆಗೆ ಸದಸ್ಯತಾ ಅಭಿಯಾನಕ್ಕೆ ಜಿಲ್ಲಾಧ್ಯಕ್ಷರು ಹಾಗೂ ಸಿ.ಸಿ. ಪಾಟೀಲರು, ನಗರ ಅಧ್ಯಕ್ಷ ಅನಿಲ ಅಬ್ಬಿಗೇರಿ, ಸದಸ್ಯತಾ ಅಭಿಯಾನದ ಜಿಲ್ಲಾ ಸಂಚಾಲಕ ಲಿಂಗರಾಜ ಪಾಟೀಲ, ಗಂಗಾಧರ ಹಬೀಬ, ದೇವಪ್ಪ ಗೊಟೂರ, ಸುರೇಶ ಮರಳಪ್ಪನವರ, ಸಂತೋಷ ಅಕ್ಕಿ ಉಪಸ್ಥಿತಿಯಲ್ಲಿ ಸಾರ್ವಜನಿಕರಿಗೆ ಬಿಜೆಪಿಯ ಪ್ರಾಥಮಿಕ ಸದಸ್ಯತ್ವವನ್ನು ಕೊಡಿಸುವ ಕಾರ್ಯಕ್ರಮ ಜರುಗುವದು.

ಕಾರಣ ಬಿಜೆಪಿಯ ಪ್ರಮುಖರು, ಚುನಾಯಿತ ಪ್ರತಿನಿಧಿಗಳು, ಪಕ್ಷದ ಜಿಲ್ಲಾ ಹಾಗೂ ನಗರ ಪದಾಧಿಕಾರಿಗಳು, ಕಾರ್ಯಕರ್ತರು, ಬಿಜೆಪಿ ಅಭಿಮಾನಿಗಳು ಸದಸ್ಯತಾ ಅಭಿಯಾನದಲ್ಲಿ ಭಾಗಿಯಾಗುವಂತೆ ಪ್ರಕಟಣೆ ತಿಳಿಸಿದೆ.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಅನರ್ಹರಿಗೂ ಬಿಪಿಎಲ್ ಕಾರ್ಡ್ ಕೊಟ್ಟವರ ಮೇಲೂ ಕ್ರಮ ಆಗಲಿ

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಘೋಷಣೆ ನಂತರ ರಾಜ್ಯದಲ್ಲಿ ಬಿಪಿಎಲ್ ಕಾರ್ಡ್‌ಗೆ ಬೇಡಿಕೆ ಹೆಚ್ಚಾಗಿದೆ. ಹೇಗಾದರೂ ಮಾಡಿ ಬಿಪಿಎಲ್ ಕಾರ್ಡ್ ಪಡೆದುಕೊಳ್ಳಬೇಕು, ಆ ಮೂಲಕ ಗ್ಯಾರಂಟಿ ಯೋಜನೆಗಳ ಲಾಭ ಪಡೆಯಬೇಕು ಎಂದು ಅನೇಕ ಜನ ಬಯಸಿದ್ದಾರೆ.

ಜನರ ಈ ಅಭಿಲಾಷೆ ಸಹಜವೂ ಹೌದು. ಬಿಪಿಎಲ್ ಕಾರ್ಡ್ ಹೊಂದುವುದರಿಂದ ಸರ್ಕಾರದ ಅನೇಕ ಸೌಲಭ್ಯಗಳನ್ನ ಪಡೆಯುವದಾದರೆ, ಆ ಕಾರ್ಡ್ ಪಡೆದುಕೊಳ್ಳುವುದರಲ್ಲಿ ತಪ್ಪೇನಿಲ್ಲ ಎನ್ನುವ ಅಭಿಪ್ರಾಯದ ಜನರದ್ದು. ಕೆಲವರು ಪ್ರಾಮಾಣಿಕತೆಯಿಂದ ಅರ್ಹತೆ ಇರುವ ಕಾರಣಕ್ಕೆ ಬಿಪಿಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸಿದ್ದರೆ, ಕೆಲ ಉಳ್ಳವರು ವಾಮಮಾರ್ಗದ ಮೂಲಕ ಬಿಪಿಎಲ್ ಕಾರ್ಡ್ ಪಡೆದುಕೊಳ್ಳಲು ಮುಂದಾಗಿದ್ದಾರೆ.

ಆಹಾರ ಇಲಾಖೆ ಅಧಿಕಾರಿಗಳು ಸಹ ಪ್ರಾಮಾಣಿಕವಾಗಿ ಅರ್ಜಿ ಸಲ್ಲಿಸಿದವರನ್ನು ಪರಿಗಣಿಸುವುದೇ ಇಲ್ಲ. ನಿಜವಾದ ಬಡವರು ಇಲಾಖೆಯ ಮಟ್ಟದಲ್ಲಿ ಲಾಭಿ ನಡೆಸಿ ಬಿಪಿಎಲ್ ಕಾರ್ಡ್ ಪಡೆದುಕೊಳ್ಳುವುದು ಇಲ್ಲ. ಸರ್ಕಾರ ಕೊಟ್ಟಾಗ ಕೊಡಲಿ ಎನ್ನುವ ಮನಸ್ಥಿತಿ ಪ್ರಾಮಾಣಿಕ ಮತ್ತು ನಿಜವಾಗಿಯೂ ಬಿಪಿಎಲ್ ಕಾರ್ಡ್‌ಗೆ ಅರ್ಹತೆ ಇರುವ ಜನರದ್ದು.

ಹೀಗಾಗಿ ಇವತ್ತು ಅರ್ಹರಿಗಿಂತ ಅನರ್ಹರೇ ಅತಿ ಹೆಚ್ಚು ಬಿಪಿಎಲ್ ಕಾರ್ಡ್ ಹೊಂದಿದವರಾಗಿದ್ದಾರೆ. ಅಲ್ಪ ಸ್ವಲ್ಪ ಸ್ಥಿತಿವಂತರು ಅಧಿಕಾರಿಗಳಿಗೆ ಲಂಚ ಕೊಟ್ಟು ಕಾರ್ಡ್ ಮಾಡಿಸಿಕೊಂಡಿದ್ದಾರೆ. ಯಾವಾಗ ಸರ್ಕಾರಕ್ಕೆ ಗ್ಯಾರಂಟಿ ಯೋಜನೆಗಳು ಭಾರವಾಗಲು ಶುರುವಾಯಿತು, ಅನರ್ಹ ಬಿಪಿಎಲ್ ಕಾರ್ಡ್‌ದಾರರನ್ನ ಪತ್ತೆ ಹಚ್ಚುವ ಕೆಲಸಕ್ಕೆ ಮುಂದಾಯಿತು.

ಆಹಾರ ಇಲಾಖೆ ಈಗಾಗಲೇ ಅನರ್ಹರ ಪಟ್ಟಿಯನ್ನು ಸಿದ್ಧಪಡಿಸಿದೆ. ಅಂಥವರ ಮೇಲೆ ಕ್ರಮ ಕೈಗೊಳ್ಳುವುದಾಗಿ ಸಚಿವ ಮುನಿಯಪ್ಪ ಎಚ್ಚರಿಕೆಯನ್ನು ನೀಡಿದ್ದಾರೆ. ಆದರೆ ಅನರ್ಹರಿಗೆ ಬಿಪಿಎಲ್ ಕಾರ್ಡ್ ಮಾಡಿಕೊಟ್ಟ ಅಧಿಕಾರಿಗಳ ಮೇಲೆಯೂ ಕ್ರಮ ಕೈಗೊಳ್ಳಬೇಕಲ್ಲವೇ? ತಪ್ಪು ಮಾಡಿದ ಅಧಿಕಾರಿಗಳಿಗೆ ಶಿಕ್ಷೆಯಾದರೆ ಭವಿಷ್ಯದಲ್ಲಿ ಅರ್ಹರಿಗೆ ಮಾತ್ರ ಸರ್ಕಾರದ ಸೌಲಭ್ಯಗಳು ಸಿಗಲು ಸಾಧ್ಯ.

# ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆ. 6-9-2024 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 19,24,25 ಕರುಗಲ್ ಲೇಔಟ್, ಪುಣೇಕರ್ ಲೇಔಟ್ , ಹಾಳದಿಬ್ಬ ಓಣಿ, 3 ಭಾಗಗಳು, ಅಬ್ಬಿಗೇರಿ ಮೆಂಬರ್ ಲೈನ್, ಕರಿದೇವರ ಗುಡಿ ಲೈನ್, ಜಿ ಎಸ್ ಹಿರೇಮಠ, ಮದ್ಲಿ ಓಣಿ, ಹಳೇ ಲೈನ್, ಜೀರ್ ಓಣಿ, ಗಣಪತಿ ಗುಡಿ ಲೈನ್, ಕುರಬರ ಗರಡಿ, ಹನಮನ್ ಗರಡಿ ಲೈನ್, ಮಾಬುಸುಭಾನಿ ಕಟ್ಟಿ ಲೈನ್, ಕೊಪ್ಪದ್ ಅವರ ಲೈನ್, ಖಾನ ತೋಟ ಭಾಗ 1,

ವಾರ್ಡ್ ನಂ. 12, ಇರಾನಿ ಕಾಲೋನಿ, ಕರಿಯಮ್ಮನ ಗುಡಿ ಲೈನ್, ಗಾಣಗೇರ ಭವನ, ಗಣಪತಿ ಗುಡಿ, ಹಳೆ ಚರ್ಚ್ ಲೈನ್, ಮಾರುತಿ ಗುಡಿ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 7, 5, ಪಂಚ ಲಕ್ಷ್ಮಿ ಬಡಾವಣೆ, ಶಿವಾಜಿ ನಗರ, ರಂಗಪ್ಪಜ್ಜನ 2ನೇ ಬ್ಯಾಚ್, ನೀಲಕಂಠ ಮಠದ ಲೈನ್, ಹಿಂದಿನ ಲೈನ್, ರಾಮನಗರ 2ನೇ ಕ್ರಾಸ್, ಉಳಿದ ಭಾಗಗಳು,

ವಾರ್ಡ್ ನಂ. 22 ಗಂಗಿಮಡಿ , ದೊಡ್ಡ ಮಸೂತಿ, 1400, 1600, 2000, 1800, ಮನೆಗಳ ಲೈನ್, ವಾರ್ಡ್ ನಂ. 30,34, ರೆಲ್ಲಿ 76 ಪ್ಲಾಟ್,46 ಪ್ಲಾಟ್, ವಡ್ಡರಗೇರಿ ಕೆಲವು ಉಳಿದ ಭಾಗಗಳು

ಅವಳಿ ನಗರದ ಸಾರ್ವಜನಿಕರು ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂ.ಕೆ. ಲಮಾಣಿ ರಾಜ್ಯಮಟ್ಟದ 'ಶ್ರೇಷ್ಠ ಶಿಕ್ಷಕ'

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಇಲ್ಲಿನ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜಿನ ದೈಹಿಕ ಶಿಕ್ಷಣ ಉಪನ್ಯಾಸಕ ಎಂ.ಕೆ. ಲಮಾಣಿ ಅವರನ್ನು ರಾಜ್ಯಮಟ್ಟದ ಶ್ರೇಷ್ಠ ಶಿಕ್ಷಕ ಪ್ರಶಸ್ತಿಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಶಿಕ್ಷಕರ ಘಟಕದ ರಾಜ್ಯಾಧ್ಯಕ್ಷ ಬಸವರಾಜ ಗುರಿಕಾರ ಆಯ್ಕೆ ಮಾಡಿದ್ದಾರೆ.

ಸೆ.5ರ ಗುರುವಾರ ಬೆಂಗಳೂರಿನ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಎಂ.ಕೆ. ಲಮಾಣಿ ಅವರಿಗೆ ರಾಜ್ಯಮಟ್ಟದ ಶ್ರೇಷ್ಠ ಶಿಕ್ಷಕ ಪ್ರಶಸ್ತಿ ನೀಡಲಾಗುತ್ತಿದೆ.

ಎಂ.ಕೆ. ಲಮಾಣಿ ಶಿರಹಟ್ಟಿ ತಾಲೂಕಿನಲ್ಲಿ ಈ ಹಿಂದೆ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ, ಪದವಿಪೂರ್ವ ಉಪನ್ಯಾಸಕರ ನೌಕರರ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷರಾಗಿ, ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

### ಕೊಪ್ಪಳದ ಸಾಹಿತ್ಯ ಭವನದಲ್ಲಿ ಹಮ್ಮಿಕೊಳ್ಳಾಗಿದ್ದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ ಶಾಸಕ ಕೆ. ರಾಘವೇಂದ್ರ ಹಿಟ್ನಾಳ

# ಮಕ್ಕಳ ಭವಿಷ್ಯ ರೂಪಿಸುವ ಶಕ್ತಿ ಶಿಕ್ಷಕರಿಗಿದೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಂದಿನ ಮಕ್ಕಳೇ ಈ ನಾಡಿನ ಭವ್ಯ ಪ್ರಜೆಗಳಾಗಿದ್ದು, ಮಕ್ಕಳ ಭವಿಷ್ಯ ರೂಪಿಸುವ ಶಕ್ತಿ ಶಿಕ್ಷಕರಿಗಿದೆ ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ್ ಅವರು ಹೇಳಿದರು.

ನಗರದ ಸಾಹಿತ್ಯ ಭವನದಲ್ಲಿ ಹಮ್ಮಿಕೊಳ್ಳಾಗಿದ್ದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.



ಶಿಕ್ಷಕರು ದೇಶದ ನಿರ್ಮಾಪಕರಾಗಿದ್ದಾರೆ. ಡಾ.ಸರ್ವಪಲ್ಲಿ ರಾಧಕೃಷ್ಣನ್ ಅವರು ದೇಶದ ರಾಷ್ಟಪತಿಗಳು ಉಪರಾಷ್ಟಪತಿಗಳಾಗಿ ಅಪಾರ ಕೊಡುಗೆ ನೀಡಿದ್ದಾರೆ. ಶಿಕ್ಷಕರೊಬ್ಬರು ತಮ್ಮ ಪರಿಶ್ರಮದ ಫಲವಾಗಿ ರಾಷ್ಟ್ರದ ಅತ್ಯುನ್ನತ ಸ್ಥಾನಕ್ಕೆ ಏರಿದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನವನ್ನು ಶಿಕ್ಷಕರ ದಿನವನ್ನಾಗಿ ಆಚರಿಸಲಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗಕ್ಕೆ 371(ಜೆ) ವಿಶೇಷ ಸ್ಥಾನ ಸಿಕ್ಕಿದ್ದು, ಇದರಿಂದ ಈ ಭಾಗದ ಜನರಿಗೆ ಸರ್ಕಾರಗಳ ಯೋಜನೆಗಳು, ಶಿಕ್ಷಣಕ್ಕಾಗಿ ವಿಶೇಷ ಸೌಲಭ್ಯಗಳು, ಇನ್ನಿತರ ಅವಕಾಶಗಳು ಸಿಗಲಿವೆ. ಇದಕ್ಕಾಗಿ ಹಲವಾರು ನಾಯಕರ ಪರಿಶ್ರಮ ಅಡಗಿದೆ. ಅವುಗಳ ಸದ್ಬಳಕೆ ಆಗಬೇಕು. ಈ ಬಾರಿಯ ಜಿಲ್ಲೆಯ ಎಸ್.ಎಸ್.ಎಲ್.ಸಿ ಫಲಿತಾಂಶ ಕಡಿಮೆಯಾಗಿದ್ದು, ಫಲಿತಾಂಶ ಸುಧಾರಣೆಗಾಗಿ ಅಗತ್ಯ ಕ್ರಮ ಕೈಗೊಳ್ಳಬೇಕು. ಶಿಕ್ಷಕರು ಪ್ರಾಮಾಣಿಕ ಪ್ರಯತ್ನ, ಚಿಂತನೆಗಳಿಂದ ಮಕ್ಕಳ ಉತ್ತಮ ಭವಿಷ್ಯವನ್ನು ರೂಪಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ಶಿಕ್ಷಕರು ನಮ್ಮ ಜಿಲ್ಲೆಯ ಮಕ್ಕಳ ಉತ್ತಮ ಶಿಕ್ಷಣಕ್ಕೆ ಶ್ರಮಿಸಿ ಜಿಲ್ಲೆಯನ್ನು ಎತ್ತರ ಸ್ಥಾನಕ್ಕೆ ತರುವಂತೆ ಮಾಡಬೇಕು ಎಂದು ಹೇಳಿದರು.

ವೇತನ ಪರಿಷ್ಕರಣೆಗಾಗಿ ಸರ್ಕಾರಿ ನೌಕರರ ಬೇಡಿಯನ್ನು ಪರಿಗಣಿಸಿದ ರಾಜ್ಯ ಸರ್ಕಾರವು 7ನೇ ವೇತನವನ್ನು ಜಾರಿಗೊಳಿಸಿದೆ. ಜಿಲ್ಲೆಯಲ್ಲಿ ಗುರುಭವನ ನಿರ್ಮಾಣ ಕಾಮಗಾರಿಗೆ ವೇಗ ನೀಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದರು.

ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡಿ, ಯಾವುದೇ ಒಬ್ಬ ವ್ಯಕ್ತಿ ಒಂದು ಒಳ್ಳೆಯ ಸ್ಥಾನಕ್ಕೆ ಬರಲು ಶಿಕ್ಷಕರ ಪಾತ್ರ ಪ್ರಮುಖವಾಗಿರುತ್ತದೆ. ಇಂದು ನಾನು ಈ ಸ್ಥಾನಕ್ಕೆ ಬರಲು ನನ್ನ ಶಿಕ್ಷರ ಪರಿಶ್ರಮವುವಿದೆ. ಶಿಕ್ಷಕ ವೃತ್ತಿಯು ಅತ್ಯಂತ ಪವಿತ್ರವಾದದ್ದು. ಮಕ್ಕಳಿಗೆ ಸುಂದರ ಭವಿಷ್ಯವನ್ನು ಕಟ್ಟಿಕೊಡಬೇಕು. ಮಕ್ಕಳ ಉತ್ತಮ ಭವಿಷ್ಯ ರೂಪಿಸುವಲ್ಲಿ ಪೋಷಕರು ಹಾಗೂ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಗಡಿ ಭಾಗಗಳಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿಯಾಗಬೇಕು. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಅಂತಹ ಶಾಲೆಗಳಿಗೆ ಭೇಟಿ ವಿಶೇಷ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿ ಕಲರವ ಸ್ನೇಹ ಬಳಗದವರು ಸರ್ಕಾರಿ ಶಾಲೆಗಳಿಗೆ ಸುಣ್ಣ-ಬಣ್ಣ ಮಾಡುವುದರ ಮೂಲಕ ಸರ್ಕಾರಿ ಶಾಲೆಗಳಿಗೆ ಮೆರಗು ನೀಡುತ್ತಿದ್ದಾರೆ. ಈ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಜಿ.ಪಂ ಸಿಇಒ ರಾಹುಲ್ ರತ್ನಂ ಪಾಂಡೆಯ ಮಾತನಾಡಿ, ಜಿಲ್ಲೆಯಲ್ಲಿ ಈ ಬಾರಿ ಎಸ್.ಎಸ್.ಎಲ್.ಸಿ ಫಲಿತಾಂಶ ಸ್ವಲ್ಪ ಕಡಿಮೆಯಾಗಿದ್ದು, ಈ ಹಿನ್ನೆಲೆಯಲ್ಲಿ ಎಲ್ಲಾ ಶಿಕ್ಷಕರೊಂದಿಗೆ ಈಗಾಗಲೇ ಸಭೆ, ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಾಮಾಜಿಕ ಬದಲಾವಣೆಗೆ ಶಿಕ್ಷಕರಲ್ಲಿ ಶಕ್ತಿ ಇದ್ದು, ಹೊಸ-ಹೊಸ ಪ್ರಯೋಗಗಳನ್ನು ಅನುಸರಿಸಿ ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸಬೇಕು. ಮುಂದಿನ ಬಾರಿಯ ಎಸ್.ಎಸ್.ಎಲ್.ಸಿ ಫಲಿತಾಂಶವು ಹೆಚ್ಚಿಸಬೇಕು. ಸ್ವಚ್ಛ ಭಾರತ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸುಮಾರು 6 ಸಾವಿರಗಳಷ್ಟು ಅರ್ಜಿ ಬಂದಿದ್ದವು, ಸಾರ್ವಜನಿಕರಿಗೆ ವಿಶೇಷ ಜಾಗೃತಿ ಮತ್ತು ಶೌಚಾಲಯ ನಿರ್ಮಾಣಕ್ಕೆ ಪ್ರೋತ್ಸಾಹಿಸಲು ಶಿಕ್ಷಕರನ್ನು ಈ ಅಭಿಯಾನದಲ್ಲಿ ತೊಡಗಿಸಿಕೊಂಡಾಗ ಸುಮಾರು 10 ಸಾವಿರ ಅರ್ಜಿಗಳು ಬಂದಿವೆ. ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಾಯಧನವು ಈ ವರ್ಷ ಕೊನೆಗೊಳ್ಳಲಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಿ ಜಿಲ್ಲೆಯಾದ್ಯಂತ ಎಲ್ಲಾ ಮನೆಗಳಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಶಿಕ್ಷಕರು ಶ್ರಮಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾ ಕಸಪಾ ಅಧ್ಯಕ್ಷ ಶರಣೆಗೌಡ ಪೊಲೀಸ್ ಪಾಟೀಲ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್ ಬಿರಾದಾರ, ಜಿಲ್ಲಾ ಸರ್ಕಾರಿ ನೌಕರ ಸಂಘದ ಪ್ರಧಾನ ಕಾರ್ಯದರ್ಶಿ ಶಿವಪ್ಪ ಜೋಗಿ, ವಿಕಲಚೇತನರ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರ ಬೀರಪ್ಪ ಅಂಡಗಿ, ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಅಧ್ಯಕ್ಷ ಬಾಬುಸಾಬ ಲೈನ್‌ದಾರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಶರಣಬಸನಗೌಡ ಪಾಟೀಲ, ಕೊಪ್ಪಳ ಭೋದ-ಕೇತರ ನೌಕರರ ಸಂಘದ ಅಧ್ಯಕ್ಷ ಶಿವಶಂಕ್ರಪ್ಪ ಮರಡಿ, ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಾರುತಿ ಮ್ಯಾಗಳಮನಿ, ಕೊಪ್ಪಳ ಬಿಇಒ ಶಂಕ್ರಯ್ಯ ಟಿ.ಎಸ್., ಜಿ.ಅ.ದಾ ಕಾರ್ಯಕ್ರಮ ಶಿಕ್ಷಣಾಧಿಕಾರಿ ಅನಿತಾ ಎಸ್.ಆರ್. ಸೇರಿದಂತೆ ಶಿಕ್ಷಕರ ಮತ್ತು ಪದವಿ ಪೂರ್ವ ಉಪನ್ಯಾಸಕರ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಕೊಪ್ಪಳ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

### ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಕಾರ್ಯಕ್ರಮದಲ್ಲಿ ಶ್ರೀಶೈಲ ಸೋಮನಕಟ್ಟಿ

# ಪತ್ರಿಕಾ ವಿತರಕರ ಕಾರ್ಯ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಗದಗ



ಆಧುನಿಕ ಡಿಜಿಟಲ್ ಮಾಧ್ಯಮಗಳ ಭರಾಟೆಯ ನಡುವೆಯೂ ದಿನಪತ್ರಿಕೆಗಳ ವಿಶ್ವಾಸಾರ್ಹತೆ ಮುಂದುವರೆದಿದೆ. ಪತ್ರಿಕೆ ಓದುವುದರಿಂದ ಸಿಗುವ ಜ್ಞಾನ ಇನ್ನುಳಿದ ಮಾಧ್ಯಮಗಳಿಂದ ಸಿಗುವುದಿಲ್ಲ. ಅಂತಹ ಜ್ಞಾನವನ್ನು ಮನೆ ಮನೆಗೆ ತಲುಪಿಸುತ್ತಿರುವ ಪತ್ರಿಕಾ ವಿತರಕರ ಕಾರ್ಯ ಮೆಚ್ಚುವಂತಹುದು ಎಂದು ಜಿಲ್ಲಾ ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಹೇಳಿದರು.

ಬುಧವಾರ ಬೆಟಗೇರಿಯ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ನಡೆದ ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಹಾಗೂ ಸಂಘದ 13ನೇ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಿಕಾ ವಿತರಕರು ಅಸಂಘಟಿತ ಕಾರ್ಮಿಕರ ವಲಯದಲ್ಲಿ ಗುರುತಿಸಿಕೊಂಡಿದ್ದಾರೆ. ಅವರಿಗೆ ಸಾಮಾಜಿಕ ಭದ್ರತೆ ನೀಡುವ ಉದ್ದೇಶದೊಂದಿಗೆ ಆಕಸ್ಮಿಕವಾಗಿ ಮರಣ ಹೊಂದಿದವ ಕುಟುಂಬಸ್ಥರಿಗೆ ಸರಕಾರದಿಂದ 2 ಲಕ್ಷ ರೂ., ಶಾಶ್ವತ ಅಂಗವಿಕಲರಾದರೆ, ಮಾರಣಾಂತಿಕ ಕಾಯಿಲೆ ತುತ್ತಾದರೂ ನೆರವು ನೀಡಲಾಗುತ್ತಿದೆ. ಜಿಲ್ಲೆಯಲ್ಲಿ 97 ಜನ ಪತ್ರಿಕಾ ವಿತರಕರು ಈಗಾಗಲೇ ಇ-ಶ್ರಮ ಪೋರ್ಟಲ್‌ನಲ್ಲಿ ನೊಂದಣಿ ಮಾಡಿಕೊಂಡಿದ್ದು, ಉಳಿದ ಅರ್ಹ ಪತ್ರಿಕಾ ವಿತರಕರು ನೋಂದಣಿ ಮಾಡಿಕೊಂಡು ಸೌಲಭ್ಯ ಪಡೆದುಕೊಳ್ಳಬಹುದಾಗಿದೆ ಎಂದು ವಿವರಿಸಿದರು.

ಕರ್ನಾಟಕ ಪತ್ರಕರ್ತರ ಸಂಘದ ಅಧ್ಯಕ್ಷ ಮುರುಗೇಶ ಶಿವಪೂಜೆ ಮಾತನಾಡಿ, ದೇಶದಲ್ಲಿ ಲಕ್ಷಾಂತರ ಪತ್ರಿಕೆ ವಿತರಕರಿದ್ದಾರೆ. ಅಂತಹ ಒಂದು ದೊಡ್ಡ ಸಮುದಾಯದ ಕ್ಷೇಮಾಭಿವೃದ್ಧಿ ಸಲುವಾಗಿ ಎಲ್ಲರೂ ಕೈಜೋಡಿಸಬೇಕಿದೆ ಎಂದರು.

ಸಂಘದ ಜಿಲ್ಲಾಧ್ಯಕ್ಷ ವೀರಬಸಯ್ಯ ವಿರಕ್ತಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಪತ್ರಿಕಾ ವಿತರಕರಿಗೆ ವೃತ್ತಿ ಸಂಬಂಧಿ ಯೋಜನೆಗಳನ್ನು ಸರಕಾರ ಜಾರಿಗೊಳಿಸಬೇಕು. ಪತ್ರಿಕಾ ವಿತರಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸೌಲಭ್ಯ ನೀಡಬೇಕು ಎಂದು ಕಾರ್ಮಿಕ ಇಲಾಖೆ ಅಧಿಕಾರಿಗಳಲ್ಲಿ ಮನವಿ ಮಾಡಿದರು.

ಕಾನಿಪ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಸರಕಾರ ಪತ್ರಿಕಾ ವಿತರಕರನ್ನು ಅಸಂಘಟಿತ ವಲಯಕ್ಕೆ ಸೇರಿಸಿದೆ. ಪತ್ರಿಕಾ ವಿತರಕರಿಗೂ ಕಟ್ಟಡ ಕಾರ್ಮಿಕರಿಗೆ ಇರುವ ಸೌಲಭ್ಯಗಳನ್ನು ದೊರಕುವಂತಾಗಬೇಕು ಎಂದರು.

ಉದ್ಯಮಿ ಕಿಶನ್ ಮೇರವಾಡೆ ಮಾತನಾಡಿದರು. ಮುಕ್ಕಣ್ಣೇಶ್ವರ ಮಠದ ಶಂಕರಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕುನಾಲ್ ಅಬ್ಬಿಗೇರಿ, ರಮೇಶ ಭಜಂತ್ರಿ, ಸಂಘದ ಉಪಾಧ್ಯಕ್ಷ ಈರಣ್ಣ ಮಳೇಕರ, ದತ್ತಾತ್ರೆಯ ಮುಂಡರಗಿ, ವಿನಾಯಕ ಬದಿ, ಗಣೇಶ ಶಿರಹಟ್ಟಿ, ಗುರುರಾಜ ಕಲಾಲ, ಹಿರಿಯ ಸಲಹೆಗಾರರಾದ ಕೆ.ಎಸ್. ಹಿರೇಮಠ, ಪ್ರಮೋಶ ಜೋಶಿ, ಗಂಗಾಧರ ಮಡ್ಡಿ, ಸಿದ್ಧಲಿಂಗೇಶ ಮಡಿವಾಳರ ಇದ್ದರು. ಸಂಘದ ಪ್ರಧಾನ ಕಾರ್ಯದರ್ಶಿ ಮಂಜುನಾಥ ಕುಬನೂರ ಸ್ವಾಗತಿಸಿದರು. ಶಂಕರಗುರು ಕಂದಗಲ್ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಪತ್ರಿಕಾ ವಿತರಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಕ್ರೀಡಾ ಸಾಧಕರಿಗೆ ಸನ್ಮಾನ ನಡೆಯಿತು.

ಸಂಘದ ರಾಜ್ಯಾಧ್ಯಕ್ಷ ಶಂಕರ ಕುದರಿಮೋತಿ ಮಾತನಾಡಿ, ಎಲ್ಲಾ ಸಂದರ್ಭಗಳಲ್ಲಿಯೂ ಪತ್ರಿಕಾ ವಿತರಕರು ಕೆಲಸ ಮಾಡುತ್ತ ಬಂದಿದ್ದು, ಕೆಲಸ ಸಣ್ಣದೆನಿಸಿದರೂ ಶ್ರಮದಾಯಕವಾಗಿರುತ್ತದೆ. ಗ್ರಾಮೀಣ ಭಾಗದ ವಿತರಕರು ಸಹಕಾರ ನೀಡಿದಾಗ ಇನ್ನಷ್ಟು ಬೆಳವಣಿಗೆಯಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

# ಕಪ್ಪತಗುಡ್ಡ ಪರಿಸರದ ಜೀವನಾಡಿ

■ವಿಜಯಸಾಕ್ಷಿ ಸುದ್ದಿ, ಡಂಬಳ



ಇಲ್ಲಿನ ಕಪ್ಪತ್ತಗುಡ್ಡದಲ್ಲಿ ಕೊಪ್ಪಳ ಜಿಲ್ಲೆಯ ಅಳವಂಡಿ ಗ್ರಾಮದ ಶ್ರೀಸಿದ್ದೇಶ್ವರ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಘಟಕದ ಸ್ವಯಂ ಸೇವಕರು ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹ ಮಾಡುವ ಮೂಲಕ ಪರಿಸರದ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಾಮಾಜಿಕ ಕಾರ್ಯಕರ್ತ ರಾಜು ಡಾವಣಗೇರಿ, ಜಾತ್ರೆಗೆ ಬರುವ ಭಕ್ತರು ಹಾಗೂ ಪ್ರವಾಸಿಗರು ಕಪ್ಪತ್ತಗುಡ್ಡದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ಪರಿಸರದ ಮಹತ್ವದ ಕುರಿತು ಜಾಗೃತಿ ಮೂಡಿಸಬೇಕು. ರಾಜ್ಯದ ವಿವಿಧ ಜಿಲ್ಲೆಗಳ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ವಿಜ್ಞಾನಿಗಳು, ಪರಿಸರವಾದಿಗಳು ಭೇಟಿ ನೀಡುವದರಿಂದ ಕಪ್ಪತ್ತಗುಡ್ಡದ ಮಹತ್ವ ಅರಿಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಚಂದ್ರಶೇಖರ ದೊಡ್ಡಮನಿ ಮಾತನಾಡಿ, ಸಾರ್ವಜನಿಕರು ಪರಿಸರದ ಮಹತ್ವದ ಕುರಿತು ಇನ್ನೂ ಹೆಚ್ಚು ಕಾಳಜಿ ವಹಿಸಬೇಕು. ಕಪ್ಪತ್ತಗುಡ್ಡ ಬೆಲೆ ಕಟ್ಟಲಾಗದ ಅಮೂಲ್ಯ ವನ್ಯಜೀವಿಗಳ, ಹಲವು ವಿವಿಧ ಔಷಧೀಯ ಸಸ್ಯಗಳ ಜೀವನಾಡಿಯಾಗಿದೆ ಎಂದು ಹೇಳಿದರು.

ಈ ಸಮಯದಲ್ಲಿ ಎನ್.ಎಸ್.ಎಸ್. ಕಾರ್ಯಕ್ರಮ ಅಧಿಕಾರಿಗಳಾದ ಸಿದ್ದು ಅಂಗಡಿ, ಸಮಿತಿಯ ಸದಸ್ಯರಾದ ಎಂ.ಎಸ್. ಹೊಟ್ಟಿನ, ಶಿಕ್ಷಕ ನೀಲಪ್ಪ ಹಕ್ಕಂಡಿ, ಅಂಬರೇಶ ಬಚನಹಳ್ಳಿ, ಅರಣ್ಯ ಇಲಾಖೆಯ ಗೋಪಾಲ ನಾಯಕ ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಹಾಗೂ ಅರಣ್ಯ ಇಲಾಖೆಯ ಸಿಬ್ಬಂದಿ ಇದ್ದರು.

### ನಿರ್ವಹಣೆಯಿಲ್ಲದೇ ದುರ್ನಾತ ಬೀರುತ್ತಿರುವ ಪುಷ್ಕರಣಿ

# ಅಪಾಯಕರ ಸ್ಥಿತಿಯಲ್ಲಿ ಹಾಳು ಬಾವಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದ ಓಣಿಯಲ್ಲೊಂದು ಪುರಾತನ ಕಾಲದ ಪುಷ್ಕರಣಿಯಿದೆ. ಅದನ್ನು ಈಗ ಹಾಳು ಬಾವಿ ಎಂದು ಕರೆಯಲಾಗುತ್ತದೆ. ದೊಡ್ಡದಾಗಿರುವ ಈ ಬಾವಿಯಲ್ಲಿ ನೀರನ್ನು ಬಿಟ್ಟು ಉಳಿದಂತೆ ಊರಿನ ಕಸ ಕಡ್ಡಿ, ಹೊಲಸು ಎಲ್ಲವನ್ನೂ ಸಾರ್ವಜನಿಕರು ತಂದು ಸುರಿಯುತ್ತಿದ್ದಾರೆ. ಹೀಗಾಗಿ ಈ ಪುಷ್ಕರಣಿ ಇಂದು ಹಾಳು ಬಾವಿಯೆಂದು ಕರೆಯಿಸಿಕೊಳ್ಳುತ್ತಿದೆ.

ಈ ಹಾಳು ಬಾವಿಗೊಂದು ಇತಿಹಾಸವಿದೆ. ಈ ಬಾವಿಯ ಸಮೀಪದಲ್ಲಿ ಇತಿಹಾಸ ಪ್ರಸಿದ್ಧ ಶ್ರೀ ಸೋಮೇಶ್ವರನ ದೇವಸ್ಥಾನವೊಂದಿದೆ.

ಈ ದೇವಸ್ಥಾನದ ಪೂಜೆಗಾಗಿ ಬಳಸಲು ನೀರಿಗಾಗಿ ಈ ಪುಷ್ಕರಣಿಯನ್ನು ನಿರ್ಮಾಣ ಮಾಡಲಾಗಿತ್ತೆಂಬುದನ್ನು ಇತಿಹಾಸ ತಿಳಿಸುತ್ತದೆ. ಆದರೆ ಕಾಲಾನುಕ್ರಮದಲ್ಲಿ ಪುಷ್ಕರಣಿ ಹೋಗಿ ಹಾಳು ಬಾವಿಯಾಗಿರುವುದು ಇಡೀ ಊರಿನ ದುರ್ದೈವ. ಈ ಬಗ್ಗೆ ಕರ್ನಾಟಕ ಸರಕಾರದ ಪ್ರಾಚ್ಯ ಇಲಾಖೆಯೂ ಸಹ ಯಾವ ಕ್ರಮವನ್ನೂ ತೆಗೆದುಕೊಳ್ಳುತ್ತಿಲ್ಲ ಎಂಬುದು ಸಾರ್ವಜನಿಕರ ಅಳಲು.

ಈ ಪುಷ್ಕರಣಿಯ ಎದುರಿಗೆ ನರೇಗಲ್ಲ ಪಟ್ಟಣದ ಜನರ ಆರಾಧ್ಯ ದೈವವಾಗಿರುವ ಶ್ರೀ ದತ್ತಾತ್ರೇಯ ದೇವಸ್ಥಾನವಿದೆ. ಇಲ್ಲಿ ಪ್ರತಿದಿನವೂ ಒಂದಿಲ್ಲೊಂದು ಧಾರ್ಮಿಕ ಕಾರ್ಯಗಳು, ಮದುವೆ, ಮುಂಜಿಯಂತಹ ಅನೇಕ ಶುಭ ಕಾರ್ಯಗಳು ನಡೆಯುತ್ತಿವೆ. ಆದರೆ ಈ ಬಾವಿಯಲ್ಲಿನ ಹೊಲಸು ಮತ್ತು ದಂಡೆಯಲ್ಲಿರುವ ಶೌಚಾಲಯಗಳು ಸದಾಕಾಲ ದುರ್ನಾತ ಬೀರುತ್ತಿದ್ದು, ದೇವಸ್ಥಾನಕ್ಕೆ ಬರುವ ಭಕ್ತರಿಗೆ ಇನ್ನಿಲ್ಲದ ಕಿರಿಕಿರಿಯನ್ನುಂಟು ಮಾಡುತ್ತಿದೆ.

ಇದರಿಂದ ಸುತ್ತಲಿನ ನಾಗರಿಕರಿಗೆ ನಿತ್ಯವೂ ನರಕ ದರ್ಶನವಾಗುತ್ತಿದೆ. ಪಟ್ಟಣ ಪಂಚಾಯತಿ ಗಮನಕ್ಕೆ ಇದನ್ನು ತಂದಾಗ ಮುಖ್ಯಾಧಿಕಾರಿ ಮಹೇಶ ನಿಡಶೇಸಿ ತಮ್ಮ ಸಿಬ್ಬಂದಿಯವರೊಂದಿಗೆ ಸ್ಥಳಕ್ಕೆ ಬಂದು ವೀಕ್ಷಿಸಿದರು.

ಇದು ನಿಜಕ್ಕೂ ಸಾರ್ವಜನಿಕರಿಗೆ ತೊಂದರೆದಾಯಕ ಸ್ಥಿತಿಯಾಗಿದೆ. ಇದನ್ನು ಆದಷ್ಟು ಬೇಗನೆ ದುರಸ್ತಿಪಡಿಸಲಾಗುವುದು. 15ನೇ ಹಣಕಾಸು ಯೋಜನೆಯಡಿಯಲ್ಲಿ ಇದಕ್ಕಾಗಿ 8.5 ಲಕ್ಷ ರೂಪಾಯಿಗಳನ್ನು ತೆಗೆದಿರಿಸಲಾಗಿದ್ದು, ಶೀಘ್ರವೇ ಕಾಮಗಾರಿಯನ್ನು ಕೈಗೆತ್ತಿಕೊಳ್ಳುತ್ತೇವೆ

–ಮಹೇಶ ನಿಡಶೇಸಿ.
ಮುಖ್ಯಾಧಿಕಾರಿ, ಪ.ಪಂ. ನರೇಗಲ್ಲ.

ಶ್ರೀ ಸೋಮೇಶ್ವರ ಸಭಾಭವನ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸೌಹಾರ್ದಯುತ ಸಹಬಾಳ್ವೆ ಜೀವನದ ಉಸಿರಾಗಲಿ

■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಮಾನವನಿಗೆ ಸಂಸ್ಕಾರ ದೊರೆತರೆ ಬೆಲೆಯುಳ್ಳ ಬದುಕು ಸಾರ್ಥಕಗೊಳ್ಳುತ್ತದೆ. ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ. ಪರಸ್ಪರ ಸಹಕಾರದಿಂದ ಸರ್ವೋನ್ನತಿ ಸಾಧ್ಯ. ಸೌಹಾರ್ದಯುತ ಸಹಬಾಳ್ವೆ ಜೀವನದ ಉಸಿರಾಗಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ಬಸವೇಶ್ವರಸ್ವಾಮಿ ಪಟ್ಟಣ ಪತ್ತಿನ ಸಹಕಾರ ಸಂಘದ ನೂತನ ಕಾರ್ಯಾಲಯ ಉದ್ಘಾಟನೆ ಹಾಗೂ ಸ್ವಯಂಭು ಶ್ರೀ ಸೋಮೇಶ್ವರ ಸಭಾಭವನ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸತ್ಯಾನ್ವೇಷಣೆಯ ಹಾದಿಯಲ್ಲಿ ನಡೆದಾಗ ಜೀವನ ಮೌಲ್ಯ ಸಮೃದ್ಧಿಯಾಗುತ್ತದೆ. ಸತ್ಯ-ಶಾಂತಿ ಎಲ್ಲರ ಬಾಳಿಗೆ ಅಗತ್ಯ. ಆಹಾರ-ನೀರಿನಿಂದ ಮನುಷ್ಯ ದೈಹಿಕವಾಗಿ ಬಲಗೊಂಡರೆ ಧರ್ಮ ಮತ್ತು ಧರ್ಮಾಚರಣೆಯಿಂದ ಜೀವನ ವಿಕಾಸಗೊಳ್ಳುತ್ತದೆ. ಮನುಷ್ಯನಲ್ಲಿ ಕರ್ತವ್ಯ, ಶಿಸ್ತು, ಶ್ರದ್ಧೆ, ಛಲ, ಸಮರ್ಪಣಾ ಮನೋಭಾವ ಬೆಳೆಸಿಕೊಳ್ಳಬೇಕು. ದೇಹವನ್ನು ದುಡಿಮೆಗೆ ಮನಸ್ಸನ್ನು ಭಗವಂತನಿಗೆ ಅರ್ಪಿಸಿ ಮುನ್ನಡೆದರೆ ಜೀವನ ಸುಖಮಯವಾಗುತ್ತದೆ. ಸಿದ್ಧಾಂತ ರಹಿತ ಜೀವನವು ದಿಕ್ಸೂಚಿ ಇಲ್ಲದ ನೌಕೆಯಂತೆ ನಮ್ಮ ಬದುಕಾಗಬಾರದು.



ಇನ್ನೊಬ್ಬರಿಗೆ ನಮ್ಮ ಬದುಕು ಮಾದರಿಯಾಗಬೇಕಲ್ಲದೇ ಮಾರಕವಾಗಬಾರದು. ಶ್ರೀ ಬಸವೇಶ್ವರಸ್ವಾಮಿ ಪತ್ತಿನ ಸಹಕಾರ ಸಂಘದಿಂದ ಸ್ವಯಂಭು ಶ್ರೀ ಸೋಮೇಶ್ವರ ಸಭಾಭವನ ಸುಂದರವಾಗಿ ಭವ್ಯವಾಗಿ ನಿರ್ಮಿಸಿದ್ದನ್ನು ಕಂಡು ಅತ್ಯಂತ ಸಂತೋಷವಾಗಿದೆ. ಇದಕ್ಕಾಗಿ ಶ್ರಮಿಸಿದ ಸರ್ವರಿಗೂ ಹೃದಯ ತುಂಬಿದ ಶುಭ ಹಾರೈಕೆಗಳು ಎಂದರು.

ಸಂಘದ ಮಾಜಿ ಅಧ್ಯಕ್ಷ ಹೆಚ್.ವಿ. ಮಹೇಶ್ವರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘ 99 ವರ್ಷಗಳಿಂದ ನಡೆದು ಬಂದ ದಾರಿಯನ್ನು ಸವಿಸ್ತಾರವಾಗಿ ತಿಳಿಸಿದರು. ಸಂಘದ ಅಧ್ಯಕ್ಷ ಕೆ.ಎಸ್. ತಾರಾನಾಥ್ ಅಧ್ಯಕ್ಷತೆ ವಹಿಸಿದ್ದರು.

ಎಡೆಯೂರು ರೇಣುಕ ಶಿವಾಚಾರ್ಯರು, ಮಳಲಿ ಡಾ. ನಾಗಭೂಷಣ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು.

ಶಾಸಕ ಎಸ್.ಎನ್. ಚನ್ನಬಸಪ್ಪ, ವಿಧಾನ ಪರಿಷತ್ ಸದಸ್ಯ ಡಾ. ಧನಂಜಯ ಸರ್ಜಿ, ಕ.ರಾ. ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ, ಸೂಡಾ ಅಧ್ಯಕ್ಷ ಹೆಚ್.ಎಸ್. ಸುಂದರೇಶ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಎಸ್.ಕೆ. ಮರಿಯಪ್ಪ, ನಿರ್ದೇಶಕರಾದ ಮಹಾಲಿಂಗಯ್ಯ ಶಾಸ್ತ್ರಿ, ಜಿ.ಎನ್. ಸುಧೀರ್, ಶ್ರೀ ಬಸವೇಶ್ವರ ವೀ.ಸ.ಸೇ. ಸಂಘದ ಅಧ್ಯಕ್ಷ ಎಸ್.ಎಸ್. ಜ್ಯೋತಿಪ್ರಕಾಶ್, ಅ.ಭಾ.ವೀ. ಮಹಾಸಭಾ ಜಿಲ್ಲಾಧ್ಯಕ್ಷ ಎಸ್.ಎನ್. ರುದ್ರಮುನಿ, ಎಂ. ಶ್ರೀಕಾಂತ, ಮಾಜಿ ಶಾಸಕ ಹೆಚ್.ಎಂ. ಚಂದ್ರಶೇಖರಪ್ಪ, ನಾಗಭೂಷಣ ಕಲ್ಮನೆ, ಆರ್.ತೇಜೋಮೂರ್ತಿ, ಟಿ.ವಿ. ಶ್ರೀನಿವಾಸ್ ಭಾಗವಹಿಸಿದ್ದರು.

ನೂತನ ಸಭಾ ಭವನವನ್ನು ಉದ್ಘಾಟಿಸಿದ ಮಾಜಿ ಮುಖ್ಯ ಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಮಾತನಾಡಿ, ಶಿವಮೊಗ್ಗ ಜಿಲ್ಲೆ ಸರ್ವಾಂಗೀಣ ಪ್ರಗತಿ ಹೊಂದಿದ್ದು ಸಹಕಾರಿ ರಂಗದಲ್ಲಿಯೂ ಕೂಡ ಅಗ್ರ ಸ್ಥಾನದಲ್ಲಿದೆ. ಸಹಕಾರಿ ಸಂಸ್ಥೆಗಳು ಬೆಳೆಯಲು ಜನತೆಯ ಸಹಕಾರವೂ ಅವಶ್ಯಕವಾಗಿದೆ. ಶ್ರೀ ಬಸವೇಶ್ವರಸ್ವಾಮಿ ಪಟ್ಟಣ ಪತ್ತಿನ ಸಹಕಾರ ಸಂಘ ಎಲ್ಲರ ಸಹಕಾರದಿಂದ ಉತ್ತಮ ಲಾಭಾಂಶ ಹೊಂದಿ ಮುನ್ನಡೆಯುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಹೆಚ್.ಎಸ್. ಶಂಕರ್, ಹೆಚ್.ಎನ್. ಬಸವರಾಜ್, ಹೆಚ್.ಎಂ. ತಿಪ್ಪೇಸ್ವಾಮಿ, ಕೆ.ಸಿ. ನಾಗರಾಜ್, ವಿ.ಸಿ.ಎಸ್. ಮೂರ್ತಿ, ಬಾರಂದೂರು ಪ್ರಕಾಶ, ರಾಜೇಶ್ ಸುರಗೀಹಳ್ಳಿ, ಕೆ.ರವಿಚಂದ್ರ ಅನಿತಾ ರವಿಶಂಕರ್, ಮಾಲತೇಶ ಸಿ.ಹೆಚ್., ಜಿ. ಸೋಮಶೇಖರ್, ಶೈಲಜಾ ಪರಮೇಶ್ವರ ಹಾಗೂ ಮಲ್ಲಿಕಾರ್ಜುನ ಎಸ್.ಪಿ. ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

# ಶಿವ ಸಂಸ್ಕೃತಿಯ ಸಂವರ್ಧಕ ವೀರಭದ್ರ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬ್ರಹ್ಮ ವಿಷ್ಣು ಮೊದಲ್ಗೊಂಡು ಸಕಲ ದೇವಾನುದೇವತೆಗಳಲ್ಲಿ ಶಿವನೇ ಸರ್ವ ಶ್ರೇಷ್ಠ. ಶಿವ ಸಂಸ್ಕೃತಿಗೆ ಅಪಮಾನವಾದ ಸಂದರ್ಭದಲ್ಲಿ ಶ್ರೀ ವೀರಭದ್ರಸ್ವಾಮಿ ಅವತರಿಸಿ ದಕ್ಷ ಬ್ರಹ್ಮನ ಸಂಹಾರ ಮಾಡಿದನು. ಶಿವ ಸಂಸ್ಕೃತಿಯನ್ನು ಎತ್ತಿ ಹಿಡಿದ ಕೀರ್ತಿ ಶ್ರೀ ವೀರಭದ್ರಸ್ವಾಮಿಗೆ ಸಲ್ಲುತ್ತದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ರಂಭಾಪುರಿ ಪೀಠದಲ್ಲಿ ಶ್ರೀ ವೀರಭದ್ರೇಶ್ವರ ಜಯಂತ್ಯುತ್ಸವ ಅಂಗವಾಗಿ ಜರುಗಿದ ಪೂಜಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದುಷ್ಟ ಶಕ್ತಿಗಳು ಬಹು ಬೇಗನೇ ಬೆಳೆಯುತ್ತವೆ. ಅಷ್ಟೇ ಬೇಗನೇ ನಾಶ ಹೊಂದುತ್ತವೆ. ದುಷ್ಟ ಶಕ್ತಿಗಳ ಜೊತೆಗೆ ಹೋರಾಟ ಮಾಡಿ ಜಯ ತಂದಿತ್ತ ಇತಿಹಾಸವಿದೆ. ದಕ್ಷಬ್ರಹ್ಮನ ಅಹಂಕಾರ ಮಿತಿ ಮೀರಿದಾಗ, ಶಿವನಿಗೆ ಅಪಮಾನ ಮಾಡಿದಾಗ ದಾಕ್ಷಾಯಣಿ ಯಜ್ಞ ಕುಂಡಕ್ಕೆ ಹಾರಿದ ಸಂದರ್ಭದಲ್ಲಿ ಶಿವನ ಜಟಾಮುಕುಟದಿಂದ ಅವತರಿಸಿ ದಕ್ಷನನ್ನು ಸಂಹರಿಸಿ ಶಿವನ ಮಹಿಮೆಯನ್ನು ಬೆಳೆಸಿದ ಕೀರ್ತಿ ಶ್ರೀ ವೀರಭದ್ರಸ್ವಾಮಿಗೆ ಸಲ್ಲುತ್ತದೆ. ದುಷ್ಟ ದುರಹಂಕಾರಿಗಳ ದರ್ಪವನ್ನು ನಾಶ ಮಾಡಿ ಶಿಷ್ಟರ ಸಂರಕ್ಷಣೆಗಾಗಿ ಅವತರಿಸಿ ಬಂದಾತನೇ ವೀರಭದ್ರಸ್ವಾಮಿ. ಪ್ರತಿ ವರುಷ ಭಾದ್ರಪದ ಮೊದಲ ಮಂಗಳವಾರ ನಾಡಿನೆಲ್ಲೆಡೆ ಶ್ರೀ ವೀರಭದ್ರೇಶ್ವರ ಜಯಂತ್ಯುತ್ಸವ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿ. ಇಂದಿನ ಕಲಿಕಾಲದಲ್ಲಿ ಮತ್ತೊಮ್ಮೆ ಶ್ರೀ ವೀರಭದ್ರಸ್ವಾಮಿ ಅವತರಿಸಿ ಉತ್ಕೃಷ್ಟ ಸಂಸ್ಕೃತಿ ಬೆಳೆಸುವಂತಾಗಲೆಂದು ಆಶಿಸಿದರು.

ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶ್ರೀಗಳು, ಸಿಂಧನೂರು ಕನ್ನೂರಿನ ಸೋಮನಾಥ ಶ್ರೀಗಳು, ಗುರುಕುಲದ ಸಿದ್ಧಲಿಂಗಯ್ಯ ಹಿರೇಮಠ, ಗುರುಕುಲದ ಶಿವಯೋಗ ಸಾಧಕರು ಪೂಜೆಯಲ್ಲಿ ಪಾಲ್ಗೊಂಡರು.

ಶ್ರೀ ವೀರಭದ್ರೇಶ್ವರ ಮಂಗಲ ಮೂರ್ತಿಗೆ ವಿಶೇಷ ಪುಷ್ಪಾಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು.



ಗದಗ ನಗರದ ವಾರ್ಡ್ ನಂ. 13ರಲ್ಲಿ ಬುಧವಾರ ಸಿ.ಸಿ. ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು. ದೊಡ್ಡಣ್ಣವರ ಮನೆಯಿಂದ ಹೂಗಾರ ಅವರ ಮನೆ ಸಂಪರ್ಕಿಸುವ ರಸ್ತೆ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಮುತ್ತಣ್ಣ ಮುಶಿಗೇರಿ, ವಿಶ್ವನಾಥ ಬಟ್ಟೂರ, ಈರಣ್ಣ ಹೂಗಾರ, ಅರವಿಂದ ಶೆಟ್ಟರ, ನಾಗರಾಜ ಉಮಚಗಿ, ಮುಂತಾದವರು ಉಪಸ್ಥಿತರಿದ್ದರು.

# ಬಸ್ ನಿಲುಗಡೆಗೆ ಆಗ್ರಹಿಸಿ ಮನವಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಿದ್ಯಾರ್ಥಿಗಳಿಗೆ, ಹಿರಿಯ ನಾಗರಿಕರಿಗೆ, ಗರ್ಭಿಣಿಯರಿಗೆ ತೊಂದರೆಯಾಗುತ್ತಿದ್ದು, ದಾವಣಗೆರೆ ಮಾರ್ಗವಾಗಿ ಚಲಿಸುತ್ತಿರುವ ಬಸ್‌ಗಳನ್ನು ನಿಲುಗಡೆ ಮಾಡಬೇಕು ಎಂದು ಉಪನ್ಯಾಸಕ ಕೊಟ್ರೇಶ್ ಆಗ್ರಹಿಸಿದರು.

ತಾಲೂಕಿನ ಜಿಟ್ಟನಕಟ್ಟಿ ಗ್ರಾಮದಲ್ಲಿ ಬುಧವಾರ ಕರವೇ ಹಾಗೂ ತಲುವಾಗಲು, ಗುಂಡಗತ್ತಿ, ಬಾಲೇನಹಳ್ಳಿ ಗ್ರಾಮಸ್ಥರ ಸಹಯೋಗದೊಂದಿಗೆ ದಾವಣಗೆರೆ ಮಾರ್ಗವಾಗಿ ಚಲಿಸುತ್ತಿರುವ ತಡೆರಹಿತ ವಾಹನಗಳನ್ನು ನಿಲುಗಡೆ ಮಾಡಬೇಕು ಎಂದು ಆಗ್ರಹಿಸಿ ಸಾರಿಗೆ ವ್ಯವಸ್ಥಾಪಕಿ ಮಂಜುಳ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದರು.



ಬಸ್ ನಿಲುಗಡೆ ಕೋರಿ ಹಲವಾರು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಗ್ರಾಮಸ್ಥರು, ವಿದ್ಯಾರ್ಥಿಗಳು ತೊಂದರೆಯನ್ನು ಅನುಭವಿಸಬೇಕಾಗಿದೆ. ಕೂಡಲೇ ಬಸ್ ನಿಲುಗಡೆ ಮಾಡಬೇಕು ಎಂದು ಕರವೇ ತಾಲೂಕು ಅಧ್ಯಕ್ಷ ಗಿರಜ್ಜಿ ನಾಗರಾಜ ಆಗ್ರಹಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಾರಿಗೆ ವ್ಯವಸ್ಥಾಪಕಿ ಮಂಜುಳ, ಸೋಮವಾರದಿಂದ ಬಸ್ ನಿಲುಗಡೆ ಮಾಡುವ ವ್ಯವಸ್ಥೆ ಮಾಡುತ್ತೇವೆ ಎಂದು ಭರವಸೆ ನೀಡಿದರು. ಅರಸೀಕೆರೆ ಠಾಣೆಯ ಪಿಎಸ್‌ಐ ಕೆ. ರಂಗಯ್ಯ, ಜಾತಪ್ಪ, ಬಿ. ಬಸವರಾಜ, ಹೇಮಂತ, ವಾಗೀಶ, ಕೊಟ್ರೇಶ್, ಪರಮೇಶಪ್ಪ, ಬಣಕಾರ ಬಸವರಾಜ, ಟಿ.ಎಂ. ರುದ್ರಯ್ಯ, ಬಿ. ಲೋಹಿತಪ್ಪ, ಮುಖ್ಯ ಶಿಕ್ಷಕ ತಿರುಪತಿ, ದರ್ಶನ್, ಸಿದ್ದೇಶ್ ಹಾಗೂ ಗ್ರಾಮಸ್ಥರು ಇದ್ದರು.

# ಜಿಲ್ಲೆಯಲ್ಲಿ ಮೊಟ್ಟ ಮೊದಲ ಸಲ ಕೋಟ್ಯಾಧಿಪತಿ ರಸಪ್ರಶ್ನೆ ಸ್ಪರ್ಧೆ

- ಶ್ರೀ ಗಜಾನನ ಗೆಳೆಯರ ಬಳಗದಿಂದ ಜ್ಞಾನ ವೃದ್ಧಿಯ ವಿಭಿನ್ನ ಕಾರ್ಯಕ್ರಮ ಆಯೋಜನೆ
- ವಿಜೇತರಿಗೆ ಪುಸ್ತಕ ಮತ್ತು ಆಕರ್ಷಕ ಬಹುಮಾನ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸೆಪ್ಟೆಂಬರ್ 7ರಿಂದ ರಾಜ್ಯಾದ್ಯಂತ ಗಣೇಶ ಪ್ರತಿಷ್ಠಾಪನೆಯ ಸಡಗರ. ರಕ್ತದಾನ ಶಿಬಿರ ಹಾಗೂ ಉಚಿತ ಮಹಾಪ್ರಸಾದ ಸೇವೆ, ಬಹುತೇಕ ಗಣೇಶ ಮಂಡಳಿಗಳ ಸಾಮಾಜಿಕ ಕಾರ್ಯ. ಆದರೆ ಕೊಪ್ಪಳದ ಡಾ.ಸಿಂಪಿ ಲಿಂಗಣ್ಣ ರಸ್ತೆಯ ಶ್ರೀ ಗಜಾನನ ಗೆಳೆಯರ ಬಳಗ ಇವುಗಳ ಜೊತೆಗೆ ಈ ಸಲ ವಿಭಿನ್ನ ಕಾರ್ಯಕ್ರಮಕ್ಕೆ ರೂಪುರೇಷೆ ಸಿದ್ಧಪಡಿಸಿದೆ ಎಂದು ಬಳಗದ ಅಧ್ಯಕ್ಷ ಬಸವರಾಜ ಕರುಗಲ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕನ್ನಡದ ಮನರಂಜನಾ ವಾಹಿನಿಗಳ ಸುಪ್ರಸಿದ್ಧ ರಸಪ್ರಶ್ನೆ ಸ್ಪರ್ಧೆಗಳೆಂದರೆ ಕನ್ನಡದ ಕೋಟ್ಯಾಧಿಪತಿ ಹಾಗೂ ಥಟ್ ಅಂತ ಹೇಳಿ ಕಾರ್ಯಕ್ರಮ. ಇವುಗಳ ಮಾದರಿಯಲ್ಲಿ ಶ್ರೀ ಗಜಾನನ ಗೆಳೆಯರ ಬಳಗ ಗಣೇಶ ಪ್ರತಿಷ್ಠಾಪನೆಯ ಮೂರನೇ ದಿನ ಅಂದರೆ ಸೆಪ್ಟೆಂಬರ್ 9ರ ಸೋಮವಾರ ಕೊಪ್ಪಳದ ಕೋಟ್ಯಾಧಿಪತಿ ಕಾರ್ಯಕ್ರಮ ಆಯೋಜಿಸಿದೆ ಎಂದು ತಿಳಿಸಿದ್ದಾರೆ.

ರಸಪ್ರಶ್ನೆ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಸೆಪ್ಟೆಂಬರ್ 8ರೊಳಗೆ ಹೆಸರು ನೋಂದಾಯಿಸಬೇಕು. ಪ್ರಾಥಮಿಕ ಸುತ್ತಿನ ಪ್ರಶ್ನೆಗೆ ವೇಗದ ಸಮಯದಲ್ಲಿ ಸರಿಯುತ್ತರ ನೀಡಿದ ಸ್ಪರ್ಧಿ ಹಾಟ್‌ಸೀಟ್‌ಗೆ ಪ್ರವೇಶ ಪಡೆಯುತ್ತಾರೆ. ಅಲ್ಲಿ ಹತ್ತು ಪ್ರಶ್ನೆಗಳಿಗೆ ಉತ್ತರಿಸಲು ಎರಡು ಲೈಫ್‌ಲೈನ್ ನೀಡಲಾಗುವುದು. ಹತ್ತು ಪ್ರಶ್ನೆಗಳಿಗೆ ಸರಿಯಾದ ಉತ್ತರ ನೀಡಿದ ಸ್ಪರ್ಧಿಯನ್ನು ಒಂದು ಕೋಟಿ ಅಂಕಗಳನ್ನು ನೀಡುವ ಮೂಲಕ ಕೊಪ್ಪಳದ ಕೋಟ್ಯಾಧಿಪತಿ ಎಂದು ಘೋಷಿಸಲಾಗುವುದು. ಜೊತೆಗೆ ಹಾಟ್‌ಸೀಟ್ ಪ್ರವೇಶಿಸಿದ ಪ್ರತಿ ಸ್ಪರ್ಧಿ ಸರಿಯುತ್ತರ ನೀಡಿದ ಅಂಶಗಳನ್ನು ಆಧರಿಸಿ ಗರಿಷ್ಠ 10 ಪುಸ್ತಕಗಳನ್ನು ಬಹುಮಾನದ ರೂಪದಲ್ಲಿ ನೀಡಲಾಗುವುದು ಎಂದು ಅವರು ವಿವರಿಸಿದ್ದಾರೆ.

ಇವುಗಳ ಜೊತೆಗೆ ಮಕ್ಕಳಿಗಾಗಿ ಸ್ಲೋ ಸೈಕ್ಲಿಂಗ್ ರೇಸ್, ಸೂಪರ್ ಮಿನಿಟ್, ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ, ಎಲ್ಲ ವಯೋಮಾನದವರಿಗೆ ಚೆಸ್, ಕೇರಂ ಸ್ಪರ್ಧೆ, ವಿವಾಹಿತರಿಗೆ ಆದರ್ಶ ದಂಪತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಕೊಪ್ಪಳದ ಕೋಟ್ಯಾಧಿಪತಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಕನಿಷ್ಠ 12 ವರ್ಷ ವಯಸ್ಸಾಗಿರಬೇಕು. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ನಂಬರ್ -9380605892, 9448036636, 8088013777, 7411850242, 8660369072 ಇವರನ್ನು ಸಂಪರ್ಕಿಸಲು ಪ್ರಕಟಣೆ ಕೋರಿದೆ

# ಗುರು ಅಜ್ಞಾನದಿಂದ ಸುಜ್ಞಾನದಡೆಗೆ ಕರೆದೊಯ್ಯುವ ಬೆಳಕು

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಗುರು ಎಂದರೆ ಅಜ್ಞಾನದಿಂದ ಸುಜ್ಞಾನದ ಕಡೆಗೆ ಕರೆದೊಯ್ಯುವ ಬೆಳಕಾಗಿದ್ದಾರೆ ಎಂದು ಶಾಸಕ ಕೆ.ರಾಘವೇಂದ್ರ ಹಿಟ್ನಾಳ್ ಹೇಳಿದರು.

ನಗರದ ಬಹದ್ದೂರ ಬಂಡಿ ರಸ್ತೆಯಲ್ಲಿರುವ ಸರಸ್ವತಿ ವಿದ್ಯಾ ಮಂದಿರ ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಗುರುವಾರ ಹಮ್ಮಿಕೊಳ್ಳಲಾದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗುರು ಎಂದರೆ ವ್ಯಕ್ತಿ ಅಲ್ಲ, ಜ್ಯೋತಿ ಆಗಿದ್ದಾರೆ. ಶಿಕ್ಷಕರು ದೇಶದ ನಿರ್ಮಾಪಕರಾಗಿದ್ದು, ಶಿಕ್ಷಕರ ಪಾತ್ರ ದೇಶಕ್ಕೆ ಹಾಗೂ ಪ್ರತಿಯೊಬ್ಬರ ಜೀವನಕ್ಕೆ ಮುಖ್ಯವಾದುದಾಗಿದೆ. ಗುರುವಿಲ್ಲದೆ ಜೀವನ ಅಪರಿಪೂರ್ಣವಾಗುತ್ತದೆ. ಜೀವನಕ್ಕೆ ಗುರುವಿನ ಪಾತ್ರ ಅತ್ಯಮೂಲ್ಯವಾದುದಾಗಿದೆ ಎಂದರು.




ಮಾಜಿ ಸಂಸದ ಸಂಗಣ್ಣ ಕರಡಿ ಮಾತನಾಡಿ, ಮುಂದೆ ಗುರಿ ಹಿಂದೆ ಗುರು ಇರಬೇಕು. ಶಿಕ್ಷಕರು ಮನಸ್ಸು ಮಾಡಿದರೆ ಉನ್ನತ ಮಟ್ಟದಲ್ಲಿ ಸಾಧನೆಯನ್ನು ಮಾಡಬಹುದು. ಕ್ಷಮಾಶೀಲನಾಗಿ, ದಯಾಮಯನಾಗಿ ಮಕ್ಕಳ ಮನಸ್ಸಿನಲ್ಲಿ ಪ್ರೀತಿಯಿಂದ ಅಕ್ಷರವೆಂಬ ಬೀಜ ಬಿತ್ತುವ ಕೆಲಸವನ್ನು ಪ್ರತಿಯೊಬ್ಬ ಶಿಕ್ಷಕರು ಮಾಡಬೇಕು. ಬೀಜ ಬಿದ್ದು ಮೊಳಕೆ ಒಡೆದು, ಸಸಿಯಾಗಿ ಹೆಮ್ಮರವಾಗಿ ಎಲ್ಲರಿಗೆ ಯಾವರೀತಿ ನೆರಳನ್ನು ಕೊಡುತ್ತದೆ. ಅದೇ ರೀತಿಯಾಗಿ ಶಿಕ್ಷಕರು ಮಕ್ಕಳು ಸಮಾಜದಲ್ಲಿ ಉನ್ನತ ಸ್ಥಾನದಲ್ಲಿರುವಂತೆ ಮಾಡುವುದು ಶಿಕ್ಷಕರ ಕರ್ತವ್ಯವಾಗಿದೆ ಎಂದರು.

ನಗರಸಭೆಯ ಅಧ್ಯಕ್ಷ ಅಮ್ಜದ್ ಪಟೇಲ್, ಸೈಯ್ಯದ್ ಪೌಂಡೇಷನ್ ಅಧ್ಯಕ್ಷ ಕೆ. ಎಮ್. ಸೈಯ್ಯದ್, ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಾಟಕ ಆಕಾಡೆಮಿ ಸದಸ್ಯರಾದ ಚಾಂದಪಾಷಾ ಕಿಲ್ಲೇದಾರ್, ಮಹಮ್ಮದ್ ಜೀಲಾನ್ ಸನ್ಮಾನಿಸಲಾಯಿತು.

ಬಹದ್ದೂರ್ ಬಂಡಿ ಗ್ರಾ.ಪಂ. ಅಧ್ಯಕ್ಷ ಯಲ್ಲಪ್ಪ ತಳವಾರ, ರಾಜ್ಯ ನಾಟಕ ಅಕಾಡೆಮಿಯ ಸದಸ್ಯ ಚಾಂದಪಾಷಾ ಕಿಲ್ಲೇದಾರ, ಮಹಮ್ಮದ್ ಜೀಲಾನ್, ಶರಣಪ್ಪ ಕುರಿ, ಸಂಸ್ಥೆಯ ಕಾರ್ಯದರ್ಶಿ ಆರ್.ಎಚ್.ಅತ್ತನೂರು, ಶಾಲೆಯ ಮುಖ್ಯಶಿಕ್ಷಕಿ ರೇಣುಕಾ ಅತ್ತನೂರು ಇದ್ದರು.

# ಹಿರಿಯರ ಅಗಲಿಕೆಗೆ ಯಾವಗಲ್ ಸಂತಾಪ

■ವಿಜಯಸಾಕ್ಷಿ ಸುದ್ದಿ, ಹೊಂಬಳ

ಹೊಂಬಳ ಗ್ರಾಮದ ಕಲೇಭಾಯಿ ಓಣಿಯ ಅಹಲೇ ಇಸ್ಲಾಂ ಕಮೀಟಿಯನ್ನು ನಡೆಸಿಕೊಂಡು ಬಂದ ಹಿರಿಯ ಜೀವಿ ಇಮಾಮಸಾಬ ಫಕ್ಕೀರಸಾಬ ಕಲೇಭಾಯಿ (ಬಡಿಗೇರ) ಇವರು ತಮ್ಮ 90ನೇ ವಯಸ್ಸಿನಲ್ಲಿ ಇತ್ತೀಚೆಗೆ ಪೈಗಂಬರವಾಸಿಯಾದರು. ಮೃತರು ಕಾಂಗ್ರೆಸ್ ಪಕ್ಷದ ಏಳಿಗೆಗೆ ಸಾಕಷ್ಟು ಶ್ರಮಿಸಿದ್ದಾರೆ. ಇವರು ತಮ್ಮ ಜೀವಿತಾವಧಿಯಲ್ಲಿ ಕೈ-ಕಾಲು ಮುರಿದರೆ ಕಟ್ಟು ಹಾಕುವುದು ಹಾಗೂ ಬಡಿಗತನ ವೃತ್ತಿಯಲ್ಲಿ ಜೀವನ ಸಾಗಿಸುತ್ತಿದ್ದರು. ಮೃತರು ಇಬ್ಬರು ಗಂಡು ಮಕ್ಕಳು ಹಾಗೂ ಓರ್ವ ಮಗಳನ್ನು ಅಗಲಿದ್ದಾರೆ.

ಮಾಜಿ ಸಚಿವರಾದ ಬಿ.ಆರ್. ಯಾವಗಲ್ಲ ಮೃತರ ಮನೆಗೆ ಭೇಟಿ ನೀಡಿ ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು.



# 'ನಮ್ಮೂರ ದಸರಾ' ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೇ ಸರಾಫ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯದ ಲಕ್ಷ್ಮಣಸಾ ಸಭಾಗ್ರಹದಲ್ಲಿ ಗದಗ ಎಸ್.ಎಸ್.ಕೆ ಸಮಾಜದ ಬಾಂಧವರಿಗಾಗಿ ಸೆ.6ರಂದು ಸಂಜೆ 6 ಗಂಟೆಗೆ 'ನಮ್ಮೂರ ದಸರಾ' ಕಾರ್ಯಕ್ರಮದ ಕುರಿತು ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಮಾಜ ಬಾಂಧವರು ಈ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಮಾರ್ಗದರ್ಶನ ನೀಡುವ ಮೂಲಕ ಸಭೆಯನ್ನು ಯಶಸ್ವಿಗೊಳಿಸಲು ಪಂಚ ಕಮಿಟಿಯ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಗದಗ ಉತ್ಸವ-2024'ರಲ್ಲಿ ಜರುಗಿದ ಫ್ಯಾಷನ್ ಶೋ, ಫ್ಯಾನ್ಸಿ ಡ್ರೆಸ್ ಸ್ಪರ್ಧೆ

# ವಿಜೇತರಿಗೆ ಬಹುಮಾನ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಗದಗ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ ಜಿಲ್ಲಾ ಪಂಚಾಯತ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಗದಗ ಉತ್ಸವ-2024ರಲ್ಲಿ ಮಕ್ಕಳ ಪ್ಯಾಷನ್ ಶೋ ಹಾಗೂ ಫ್ಯಾನ್ಸಿ ಡ್ರೆಸ್ ಸ್ಪರ್ಧೆಯಲ್ಲಿ ನಗರದ ಕೆ.ಎಲ್.ಇ. ಪಾರ್ಶ್ವನಾಥ, ಮಹಾವೀರ ಜೈನ್, ಅಕ್ಷರ ಬಚಪನ್, ಸನ್‌ರೈಸ್ ಹಾಗೂ ಇನ್ನಿತರ ಶಾಲೆಯ ಮಕ್ಕಳು ಭಾಗವಹಿಸಿ ಸಂಜೆಯ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಮೆರಗು ತಂದರು.

ಈ ಸ್ಪರ್ಧೆಗಳ ನಿರ್ಣಾಯಕರಾಗಿ ಆಯೇಶಾ ಲುಂಕಡ, ಸ್ನೇಹಾ ವಿ.ಹಿರೇಮಠ, ರೇಣುಕಾ ಹಬೀಬ ಆಗಮಿಸಿ, ಸ್ಪರ್ಧೆಯಲ್ಲಿ ಪಾಲ್ಗೊಂಡ ಮಕ್ಕಳ ಪ್ರತಿಭೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದ ಮೊದಲನೇ ಸುತ್ತು ಟ್ರೆಡಿಶನಲ್ ರೌಂಡ್‌ನಲ್ಲಿ ಅಕ್ಷರ ಟೆಕ್ನೋ ಶಾಲೆಯ ಮನ್ವಿತಾ ರವಿ ಹಳ್ಳಿ ಪ್ರಥಮ, ದ್ವಿತೀಯ ಪಾರ್ಶ್ವನಾಥ ಶಾಲೆಯ ಜೋಹಾ, ತೃತೀಯ ಬಹುಮಾನವನ್ನು 97ನೇ ಸಂಖ್ಯೆಯ ವಿದ್ಯಾರ್ಥಿನಿ ಪಡೆದರು.




ವೆಸ್ಟರ್ನ್ ರೌಂಡ್‌ನಲ್ಲಿ ಪ್ರಥಮ ಬಹುಮಾನ ಕೆ.ಎಲ್.ಇ. ಶಾಲೆಯ ನೇಹಾ, ದ್ವಿತೀಯ ಬಹುಮಾನ ಬಚಪನ್ ಶಾಲೆಯ ರಮಶಾ, ತೃತೀಯ ಬಹುಮಾನ ಕೆ.ಎಲ್.ಇ. ಶಾಲೆಯ ಅನ್ವಿತಾ ಪಡೆದರು.

ಫ್ಯಾನ್ಸಿ ಡ್ರೆಸ್ ಸ್ಪರ್ಧೆಯಲ್ಲಿ ಮೊದಲನೇ ಬಹುಮಾನ ಸಿ.ಡಿ.ಓ. ಜೈನ್ ಶಾಲೆಯ ಆದಿತ್ಯಾ ರಾ. ಪಾಟೀಲ, ದ್ವಿತೀಯ ಬಹುಮಾನ ಸನ್‌ರೈಸ್ ಶಾಲೆಯ ಆರೂಷ ಎಸ್. ಯಲ್ಲಪ್ಪಗೌಡ್ರ, ತೃತೀಯ ಬಹುಮಾನ ಸಾಯಿ ಆರನಾ ಪಡೆದರು.

ಈ ಸಂದರ್ಭದದಲ್ಲಿ ಉತ್ಸವ ಸಮಿತಿಯ ಚೇರಮನ್ ಚಂದ್ರಣ್ಣ ಬಾಳಿಹಳ್ಳಿಮಠ, ಅಧ್ಯಕ್ಷರಾದ ಈಶಣ್ಣ ಮುನವಳ್ಳಿ, ಗೌರವ ಕಾರ್ಯದರ್ಶಿ ಪ್ರಕಾಶ ಉಗಲಾಟದ, ಕೋಶಾಧ್ಯಕ್ಷರಾದ ಅಶೋಕ ಪಾಟೀಲ, ಸಾಂಸ್ಕೃತಿಕ ಕಾರ್ಯಕ್ರಮ ಚೇರಮನ್ ವಿಜಯಕುಮಾರ ಹಿರೇಮಠ, ಮಹಿಳಾ ಘಟಕದ ಅಧ್ಯಕ್ಷರಾದ ಸುವರ್ಣಾ ಮದರಿಮಠ, ಗೌರವ ಕಾರ್ಯದರ್ಶಿ ಜ್ಯೋತಿ ಭರಮಗೌಡ್ರ ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು.

### ಶರಣರ ತತ್ವ ಚಿಂತನೆ ಪ್ರವಚನ ಸಮಾರೋಪ, ಸಾಮೂಹಿಕ ವಿವಾಹ ಕಾರ್ಯಕ್ರಮ

# ಪರಸ್ಪರ ವಿಶ್ವಾಸದಿಂದ ಸಂಸಾರ ನಡೆಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಬ್ರಹ್ಮಚರ್ಯ, ವಾನಪ್ರಸ್ಥ, ಗೃಹಸ್ಥ ಮತ್ತು ಸನ್ಯಾಸ ಆಶ್ರಮಗಳಲ್ಲಿ ಗೃಹಸ್ಥಾಶ್ರಮವೇ ಶ್ರೇಷ್ಠವಾದದ್ದು. ಈ ದಿಸೆಯಲ್ಲಿ 12ನೇ ಶತಮಾನದ ಹೆಚ್ಚಿನ ಶರಣರು ಗೃಹಸ್ಥಾಶ್ರಮದಲ್ಲಿದ್ದುಕೊಂಡೇ ಸಾಧನೆ ಮಾಡಿದ್ದಾರೆ ಎಂದು ಡಾ. ಕೊಟ್ಟೂರೇಶ್ವರ ಸ್ವಾಮೀಜಿ ಹೇಳಿದರು.

ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದಂಗವಾಗಿ ಹಮ್ಮಿಕೊಂಡಿದ್ದ ಶರಣರ ತತ್ವ ಚಿಂತನೆಯ ಪ್ರವಚನ ಸಮಾರೋಪ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶರಣ ತತ್ವವೆಂದರೆ, ಇರುವುದರಲ್ಲಿಯೇ ತೃಪ್ತಿಪಟ್ಟುಕೊಳ್ಳುವುದಾಗಿದೆ. ಈ ಸರಳ ಜೀವನವನ್ನು ಅಳವಡಿಸಿಕೊಳ್ಳಬೇಕೆಂದರೆ ಶರಣರ ಆಚಾರ-ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ನೂತನ ದಂಪತಿಗಳು ಪರಸ್ಪರ ವಿಶ್ವಾಸದಿಂದ ಸಂಸಾರದಲ್ಲಿ ತೊಡಗಿಕೊಳ್ಳಬೇಕು. ದುಶ್ಚಟದಿಂದ ದೂರವಿದ್ದು



ಸಂಸ್ಕಾರವಂತರಾದರೆ ಮಾತ್ರ ತಮ್ಮ ಸಂತಾನ ಭಾಗ್ಯದ ಮಗುವು ಉತ್ತಮವಾಗಿರುತ್ತದೆ ಎಂದು ಸಲಹೆ ನೀಡಿದರು.

ಡಾ. ಗಿರಿಜಾ ಹಸಬಿ ಮಾತನಾಡಿ, ಕಾಮ, ಕ್ರೋಧ, ಲೋಭ, ಮೋಹ, ಮದ, ಮತ್ಸರಗಳೆಂಬ ಅರಿಷಡ್ವರ್ಗಗಳನ್ನು ಸಕಾರಾತ್ಮವಾಗಿ ಅಳವಡಿಸಿಕೊಳ್ಳಬೇಕು. ಕೇವಲ ನಮ್ಮಷ್ಟಕ್ಕೆ ನಾವು ಬದುಕಿದರೆ ಸಾಲದು. ವಿಶ್ವ ಸಂಸ್ಥೆ ಹೇಳಿದಂತೆ ಒಂದು ಕುಟುಂಬವು ಸಾಮಾಜಿಕ, ನೈತಿಕ, ಆರ್ಥಿಕ ಮತ್ತು ಧಾರ್ಮಿಕತೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಆರೋಗ್ಯವಂತ ಕುಟುಂಬವಾಗಿರಲು ಸಾಧ್ಯವಾಗುತ್ತದೆ. ಈ ದಿಸೆಯಲ್ಲಿ 12ನೇ ಶತಮಾನದ ಅಜ್ಜಗಣ್ಣ-ಮುಕ್ತಾಯಕ್ಕರ ಬದುಕು ನಮಗೆಲ್ಲಾ ಪ್ರೇರಣೆಯಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾಮದಲ್ಲಿರುವ ಮಠ-ಮಾನ್ಯಗಳಲ್ಲಿ ನಿರಂತರವಾಗಿ ನಡೆಯುವ ಧಾರ್ಮಿಕ ಕಾರ್ಯಗಳೇ ನಮಗೆ ಸ್ಫೂರ್ತಿಯಾಗಿದ್ದು, ಮಠಗಳ ಅಭಿವೃದ್ಧಿಗೆ ಸಹಾಯ-ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ನಿವೃತ್ತ ಯೋಧ ದತ್ತಾತ್ರೇಯ ಜೋಶಿ ಮಾತವನಾಡಿ, ಜೀವನದ 4 ಆಶ್ರಮಗಳಲ್ಲಿ ಗೃಹಸ್ಥಾಶ್ರಮವೇ ಎಲ್ಲ ಆಶ್ರಮಗಳಿಗೆ ಆಶ್ರಯ ಕೊಡುವದು. ಆದ್ದರಿಂದ ಸಂಸಾರದಲ್ಲಿರುವವರು ಜೀವನ ಯಶಸ್ವಿಗೊಳ್ಳಲು ಚತುರ್ವೇದದ ಪ್ರಕಾರ ಧರ್ಮ, ಅರ್ಥ, ಕಾಮ, ಮತ್ತು ಮೋಕ್ಷ ಇವುಗಳ ಬಗ್ಗೆ ಅರಿತುಕೊಂಡು ಜೀವನ ಸಾರ್ಥಕಪಡಿಸಿಕೊಳ್ಳಬೇಕು ಎಂದರು.

ಶಂಕ್ರಯ್ಯ ಹಿರೇಮಠ ಸಾಮೂಹಿಕ ವಿವಾಹದ ವಿಧಿ-ವಿಧಾನಗಳನ್ನು ನಡೆಸಿಕೊಟ್ಟರು. ಅನ್ನದಾನೀಶ್ವರ ಸೇವಾ ಸಮಿತಿಯ ಅಧ್ಯಕ್ಷ ಮಾರ್ಕಂಡಪ್ಪ ಗಡ್ಡದ ಅಧ್ಯಕ್ಷತೆ ವಹಿಸಿದ್ದರು. ಕಿತ್ತಲಿ ಗ್ರಾಮದ ಮಂಜುನಾಥ ಶ್ರೀಗಳು, ನರಸಾಪೂರ ಅನ್ನದಾನೀಶ್ವರ ಮಠದ ವೀರೇಶ್ವರ ಶ್ರೀಗಳು, ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಅನಸಮ್ಮ ಅಂಬಕ್ಕಿ, ಲಕ್ಷ್ಮವ್ವ ಭಜಂತ್ರಿ, ಅನ್ನಪೂರ್ಣ ರಿತ್ತಿ, ವಿರೂಪಾಕ್ಷಪ್ಪ ಬೆಟಗೇರಿ, ಇಂಜಿನಿಯರ್ ಅಶೋಕ ಕಣವಿ, ಅಂಗನವಾಡಿ ಮೇಲ್ವಿಚಾರಕಿ ಶಾಹೀದಬೇಗಂ ಹತ್ತಿವಾಲೆ, ಕವಿತಾ ಬಡಿಗೇರ ವೇದಿಕೆಯಲ್ಲಿದ್ದರು.

ಷಡಕ್ಷರಯ್ಯ ಬದ್ನಿಮಠ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು. ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೇವೆ ಸಲ್ಲಿಸಿದ ಮಹನೀಯರನ್ನು ಸನ್ಮಾನಿಸಲಾಯಿತು. ಶಿಕ್ಷಕ ಬಿ.ಎಸ್. ಕಣವಿ ಸ್ವಾಗತಿಸಿದರು. ಅಂಬರೀಶ ಕರೆಕಲ್ಲ ನಿರೂಪಿಸಿದರು. ಶಿವಯೋಗಿ ಡಿಗ್ಗಾವಿ ವಂದಿಸಿದರು.

## ವಿ.ಪ ಸದಸ್ಯ ಎಮ್.ಜಿ. ಮುಳೆ ಜನ್ಮದಿನ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಮರಾಠಾ ಸಮಾಜದ ನಾಯಕ, ವಿಧಾನ ಪರಿಷತ್ ಸದಸ್ಯರಾದ ಎಮ್.ಜಿ. ಮುಳೆ ಅವರ ಜನ್ಮದಿನವನ್ನು ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಯುವ ಮುಖಂಡ ಮಂಜುನಾಥ ದಾಮೋದರ, ಸರಳ ಸಜ್ಜನಿಕೆಯ ರಾಜಕಾರಣಕ್ಕೆ ಹೆಸರುವಾಸಿಯಾದ ಎಮ್.ಜಿ. ಮುಳೆ ಅವರ ವಿಚಾರಧಾರೆಗಳನ್ನು ಇಂದಿನ ಯುವಕರು ಅಳವಡಿಸಿಕೊಳ್ಳುವುದು ಅವಶ್ಯವಿದೆ ಎಂದು ಹೇಳಿದರು. ಮರಾಠಾ ಸಮಾಜದ ಮುಖಂಡರಾದ ವಿನೀತ ಜಗತಾಪ ಮಾತನಾಡಿ, ಎಮ್.ಜಿ. ಮುಳೆ ಅವರು ತಮ್ಮ ಇಡೀ ಜೀವನವನ್ನು ಮರಾಠಾ ಸಮಾಜದ ಅಭಿವೃದ್ಧಿ ಮತ್ತು ಏಳಿಗೆಗೆ ಮುಡಿಪಾಗಿಸಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾರಾಯಣರಾವ್ ಗಾಯಕವಾಡ, ಮಾರುತಿ ಅರಳಿಕಟ್ಟಿ, ಈರಣ್ಣ ಪವಾರ, ಕಿರಣ ಮೇರವಾಡೆ, ಸತೀಶ ಮಾಳೋದೆ, ಕಾರ್ತಿಕ ಪಾಸ್ತೆ, ಉದಯ ವೇರ್ಣೇಕರ, ಜಂಭಣ್ಣ ಹುಡೇದ ಮುಂತಾದವರು ಉಪಸ್ಥಿತರಿದ್ದರು.

## ಹಾಲು ಉತ್ಪಾದಕರ ಸಂಘದ ಪದಾಧಿಕಾರಿಗಳ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಜಕ್ಕಲಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಯ 12 ಸ್ಥಾನಗಳಿಗೆ ಗುರುವಾರ ನಿರ್ದೇಶಕರ ಆಯ್ಕೆ ನಡೆಯಿತು.

ಸಾಮಾನ್ಯ ಅಧ್ಯಕ್ಷ ಸ್ಥಾನದಿಂದ ಸ್ಪರ್ಧಿಸಿದ್ದ ಶೇಖರಪ್ಪ ಈಶ್ವರಪ್ಪ ಮೇಟಿ, ಸಾಮಾನ್ಯ ಉಪಾಧ್ಯಕ್ಷ ಸ್ಥಾನದಿಂದ ಸ್ಪರ್ಧಿಸಿದ್ದ ಅರುಣಕುಮಾರ ಅಶೋಕ ಕಡಗದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಕಛೇರಿಯಲ್ಲಿ ನಡೆದ ಚುನಾವಣೆಯಲ್ಲಿ 2 ಸ್ಥಾನಗಳಿಗೆ ಒಬ್ಬೊಬ್ಬರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆ ಸುಗಮವಾಗಿ ನಡೆಯಿತು. ಚುನಾವಣಾಧಿಕಾರಿಯಾಗಿ ಆಗಮಿಸಿದ್ದ ಸಹಕಾರಿ ಸಂಘದ ಉಪನಿಬಂಧಕ ಅಧಿಕಾರಿ ಪ್ರಶಾಂತ ಜಿ.ಮುಧೋಳ ಅವಿರೋಧವಾಗಿ ಆಯ್ಕೆಗೊಂಡ



ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ನಿರ್ದೇಶಕರ ಹೆಸರನ್ನು ಅಧಿಕೃತವಾಗಿ ಘೋಷಣೆ ಮಾಡಿದರು.

ಈ ವೇಳೆ ನೂತನ ಅಧ್ಯಕ್ಷ ಶೇಖರಪ್ಪ ಮೇಟಿ ಮಾತನಾಡಿ, ಎಲ್ಲಿ ಸಹಕಾರ ಇರುತ್ತದೆಯೋ ಅಲ್ಲಿ ಮಾತ್ರ ಸಂಘ ಮತ್ತು ಹಾಲು ಉತ್ಪಾದಕರು ಆರ್ಥಿಕವಾಗಿ ಪ್ರಗತಿ ಕಾಣಲು ಸಾಧ್ಯ. ರೈತರ ಸ್ವಾವಲಂಬನೆಗಾಗಿ 1989ರಲ್ಲಿ ಸಂಘವನ್ನು ಇಲ್ಲಿ ಸ್ಥಾಪನೆ ಮಾಡಲಾಗಿದೆ. ನಿತ್ಯ 500 ಲೀಟರ್ ಹಾಲನ್ನು 52 ಹಾಲು ಉತ್ಪಾದಕರು ಪೂರೈಸುತ್ತಿದ್ದಾರೆ. ಅವರಿಗೆ ಮತ್ತಷ್ಟು ಸೌಲಭ್ಯ ಕಲ್ಪಿಸಿ ಹೈನುಗಾರಿಗೆ ನಂಬಿರುವವರಿಗೆ ನೆರವಾಗಿ ನಿಲ್ಲುವೆ ಎಂದರು.

ನೂತನ ಉಪಾಧ್ಯಕ್ಷ ಅರುಣಕುಮಾರ ಕಡಗದ ಮಾತನಾಡಿ, ರಾಸುಗಳಿಗೆ ವಿಮೆ, ಹಾಲು ಉತ್ಪಾದಕರಿಗೆ ಆರೋಗ್ಯ ವಿಮೆ, ಸಕಾಲದಲ್ಲಿ ಬೋನಸ್ ವಿತರಣೆ ಸೇರಿದಂತೆ ಸಂಘ ಮತ್ತು ಹೈನುಗಾರರ ಪ್ರಗತಿಗಾಗಿ ಶ್ರಮಿಸುವೆ ಎಂದರು.

ಸಂಘದ ನಿರ್ದೇಶಕ ಮಂಡಳಿಯ ಬಸಪ್ಪ ಕೊಪ್ಪದ, ಜೀವನಸಾಬ ಬಸಾಪೂರ, ರಾಜಶೇಖರ ವಾಲಿ, ಜಂಬಣ್ಣ ಕುರ್ತಕೋಟಿ, ಹನುಮಪ್ಪ ತಳವಾರ, ಪಾರವ್ವ ಸರಗಣಾಚಾರಿ, ಮಂಜುನಾಥ ಜಂಗಣ್ಣವರ, ದೀಲಿಪಕುಮಾರ ದೊಡ್ಡಮೇಟಿ, ಮುಖಂಡ ಶೇಖಪ್ಪ ಮಾರನಬಸರಿ, ಕಾರ್ಯದರ್ಶಿ ಕಾಶಪ್ಪ ಗಾಣಿಗೇರ, ಸಹಾಯಕ ಜಗದೀಶ ಮೆಣಸಗಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಶಿಕ್ಷಕರು ದೇವರು ಕೊಟ್ಟ ವರ




**■ವಿಜಯಸಾಕ್ಷಿ ಸುದ್ದಿ, ಗದಗ**

ಒಂದು ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅತ್ಯಮೂಲ್ಯವಾದದ್ದು. ತಮ್ಮ ಜೀವನಪರ್ಯಂತ ಪ್ರತಿಯೊಬ್ಬರಿಗೂ ಶಿಕ್ಷಣದ ಅರಿವನ್ನು ಮೂಡಿಸಿ ಜ್ಞಾನವನ್ನು ನೀಡುವ ಶಿಕ್ಷಕ ನಮ್ಮ ಪಾಲಿಗೆ ಆ ದೇವರು ಕೊಟ್ಟ ವರ. ಇಂತಹ ಶಿಕ್ಷಕರಿಗೆ ಗೌರವ ಸೂಚಿಸಲು ಶಿಕ್ಷಕರ ದಿನವನ್ನು ಆಚರಿಸಲಾಗುತ್ತದೆ ಎಂದು ಪ್ರಾಂಶುಪಾಲ ಅಮರಯ್ಯ ಚಿನ್ನಯ್ಯನಮಠ ಹೇಳಿದರು.

ಇಲ್ಲಿನ ವಿ.ಪಿ. ಗಾಲಾ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್‌ನಲ್ಲಿ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು 1962ರಲ್ಲಿ ಭಾರತದ ಎರಡನೇ ರಾಷ್ಟ್ರಪತಿಯಾಗಿ ಅಧಿಕಾರ ವಹಿಸಿಕೊಂಡಾಗ, ಅವರ ವಿದ್ಯಾರ್ಥಿಗಳು ಸೆಪ್ಟೆಂಬರ್ 5ನ್ನು ವಿಶೇಷ ದಿನವಾಗಿ ಆಚರಿಸಲು ಅನುಮತಿ ಕೇಳಲು ಅವರನ್ನು ಸಂಪರ್ಕಿಸಿದರು. ಈ ವೇಳೆ ಸರ್ವಪಲ್ಲಿ ರಾಧಾಕೃಷ್ಣನ್ ಅವರು ಸಮಾಜಕ್ಕೆ ಶಿಕ್ಷಕರ ಅಮೂಲ್ಯ ಕೊಡುಗೆಯನ್ನು ಗುರುತಿಸಲು ಸೆಪ್ಟೆಂಬರ್ 5ನ್ನು ಶಿಕ್ಷಕರ ದಿನವನ್ನಾಗಿ ಆಚರಿಸಲು ಸೂಚಿಸಿದರು. ಅಂದಿನಿಂದ ವಿಶ್ವ ಶಿಕ್ಷಕರ ದಿನವನ್ನು ಅಕ್ಟೋಬರ್ 5ರಂದು ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷರಾದ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕರಾದ ಗುಂಜನ ಗಾಲಾ, ಕಾಲೇಜಿನ ಪ್ರಿನ್ಸಿಪಾಲರಾದ ಅಮರಯ್ಯ ಚಿನ್ನಯ್ಯನಮಠ ಹಾಗೂ ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಜರಿದ್ದರು.

## ಮಹಾಂತಯ್ಯನಮಠ ಮನೆಗೆ ನಿಖಿಲ್ ಭೇಟಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜೆಡಿಎಸ್ ರಾಜ್ಯ ಕಾರ್ಯದರ್ಶಿ ವೀರೇಶ ಮಹಾಂತಯ್ಯನಮಠ ಅವರ ಮನೆಗೆ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಭೇಟಿ ನೀಡಿ ಕುಶಲೋಪರಿ ವಿಚಾರಿಸಿದರು. ಕೊಪ್ಪಳದಲ್ಲಿ ಪಕ್ಷ ಸಂಘಟನಾ ಪ್ರವಾಸ ಕೈಗೊಂಡಿದ್ದ ನಿಖಿಲ್ ಕುಮಾರಸ್ವಾಮಿ, ಮಹಾಂತಯ್ಯನಮಠ ಅವರ ಮನೆಗೆ ತೆರಳಿ ಕುಟುಂಬದವರ ಆರೋಗ್ಯ ವಿಚಾರಿಸಿದರು.

ಈ ವೇಳೆ ಮಾತನಾಡಿದ ಅವರು, ನಮ್ಮ ಕುಟುಂಬದೊಂದಿಗೆ ಮಹಾಂತಯ್ಯನಮಠ ಕುಟುಂಬ ಅನಾದಿ ಕಾಲದಿಂದಲೂ ಪರಸ್ಪರ ಸಂಬಂಧ ಹೊಂದಿದೆ. ದಿ. ಎಮ್.ಎಸ್. ಮಹಾಂತಯ್ಯಮಠ ಮಾಜಿ ಪ್ರಧಾನಿ ಎಚ್.ಡಿ. ದೇವೆಗೌಡ, ಎಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ಜನತಾ ಪಕ್ಷದಿಂದಲೂ ಜತೆಗಿದ್ದವರು. ಈ ಕುಟುಂಬದ



ನಂಟು ಮರೆಯಲಾಗದು. ಎಮ್.ಎಸ್. ಮಹಾಂತಯ್ಯನಮಠ ಬಳಿಕ ಅವರ ಮಗನಾದ ವೀರೇಶ ಮಹಾಂತಯ್ಯನಮಠ ಕೂಡ ಜೆಡಿಎಸ್‌ನಲ್ಲಿಯೇ ಸಕ್ರಿಯವಾಗಿದ್ದಾರೆ.

ರಾಜಕೀಯದಲ್ಲಿ ಏನೇ ಸಮಸ್ಯೆ ಬಂದರೂ ನಮ್ಮನ್ನು ಬಿಟ್ಟುಕೊಟ್ಟಿಲ್ಲ. ಇಷ್ಟೊಂದು ಪ್ರೀತಿ ತೋರುವ ಮಹಾಂತಯ್ಯನಮಠ ಅವರ ಕುಟುಂಬದ ಪ್ರೀತಿ ಮರೆಯಲಾಗದು ಎಂದು ಸ್ಮರಿಸಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶ ಬಾಬು, ಮಾಜಿ ಸಚಿವರಾದ ಬಂಡೆಪ್ಪ ಕಾಂಶಪೂರ, ಹನುಮಂತಪ್ಪ ಆಲ್ಕೋಡ, ವೆಂಕಟರಾವ್ ನಾಡಗೌಡ, ಶಾಸಕ ನೇಮಿರಾಜ್ ನಾಯ್ಕ್, ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿ.ವಿ. ಚಂದ್ರಶೇಖರ, ರಾಜು ನಾಯಕ, ಮಹಾಂತಯ್ಯನಮಠ ಕುಟುಂಬದವರು ಇದ್ದರು.

### ಗದಗ ಜಿಲ್ಲಾ ಪ್ರಭಾರಿ ಎಸಿಎಫ್ ವೀರೇಂದ್ರ ಮರಿಬಸಣ್ಣವರರಿಗೆ ಮುಖ್ಯಮಂತ್ರಿಗಳ ಪದಕ

# ಪರಿಸರ ರಕ್ಷಕನಿಗೊಲಿದ ಗೌರವ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಸದಾ ಕಾಲ ತಮ್ಮ ಪ್ರಾಮಾಣಿಕ ಸೇವೆಯ ಮೂಲಕ ಸಾವಿರಾರು ಗಿಡಗಳನ್ನು ಸಂರಕ್ಷಿಸಿ, ಗಿಡಗಳನ್ನು ನೆಡುವುದರ ಮೂಲಕ ನೂತನ ಪರಿಸರ ಐಸಿರಿಯನ್ನು ಹುಟ್ಟುಹಾಕಿ ಪರಿಸರ ರಕ್ಷಕರಾಗಿ ಸೇವೆ ಸಲ್ಲಿಸಿದ ಗದಗ ಜಿಲ್ಲಾ ಪ್ರಭಾರಿ ಎಸಿಎಫ್ ಮತ್ತು ಗದಗ ಜಿಲ್ಲಾ ವಲಯ ಅರಣ್ಯ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ವೀರೇಂದ್ರ ಮರಿಬಸಣ್ಣವರ ಅವರಿಗೆ ಅರಣ್ಯ ಇಲಾಖೆಯ ವನ್ಯಜೀವಿಗಳ ಸಂರಕ್ಷಣೆ ವಿಭಾಗದ ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ.

ಸೋಮಶೇಖರ-ಲಕ್ಷ್ಮಿ ಅವರು ವಿರೇಂದ್ರ ಮರಿಬಸಣ್ಣವರ ಅವರ ತಂದೆ ತಾಯಿಗಳು. ಹುಲಕೋಟಿಯಲ್ಲಿ ಪ್ರಾಥಮಿಕ, ಪ್ರೌಢ, ಮಾಧ್ಯಮಿಕ ಶಿಕ್ಷಣ ಪಡೆದು ಶಿರಸಿಯಲ್ಲಿ ಅರಣ್ಯ ಮಹಾವಿದ್ಯಾಲಯದಲ್ಲಿ ಪದವಿಯನ್ನು ನಂತರ ಎಮ್‌ಎಸ್‌ಸಿಯಲ್ಲಿ ಅರಣ್ಯ ಪದವಿಯನ್ನು ಪಡೆದರು.

2014ರಲ್ಲಿ ಔರಾಧ ಭಾಗದ ಅರಣ್ಯ ಇಲಾಖೆಯಲ್ಲಿ ವೃತ್ತಿ ಜೀವನ ಆರಂಭಿಸಿ ನಂತರ 2017ರಲ್ಲಿ ಮಡಿಕೇರಿಯಲ್ಲಿ 5 ವರ್ಷ ಅಮೂಲ್ಯ ಸೇವೆ ಸಲ್ಲಿಸಿದ ಬಳಿಕ 2022ರಲ್ಲಿ ಮುಂಡರಗಿ ತಾಲೂಕಿನ ಸಸ್ಯ ಕಾಶಿ ಕಪ್ಪತ್ತಗುಡ್ಡ ವಲಯದಲ್ಲಿ



ಸಾವಿರಾರು ಗಿಡಗಳನ್ನು ನೆಡುವುದರ ಮೂಲಕ ಆಮ್ಲಜನಕ ಹೆಚ್ಚಿಸಲು ಶ್ರಮಿಸಿದ್ದಾರೆ.

ಇಲ್ಲಿನ ಬೋರಾಳ ಸಸ್ಯ ಕ್ಷೇತ್ರದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಸಸಿಗಳನ್ನು ಪೋಷಣೆ ಮಾಡಿ ಹಸಿರೀಕರಣ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರಸ್ತೆ ಬದಿ, ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ರೈತರ ಜಮೀನುಗಳಲ್ಲಿ ಹಸಿರು ಬಿತ್ತಿದ ಶ್ರೇಯಸ್ಸು ಇವರದಾಗಿದೆ.

ಮಡಿಕೇರಿ ಅರಣ್ಯ ಭಾಗದಲ್ಲಿ 5 ವರ್ಷಗಳ ಕಾಲ ವನ್ಯ ಜೀವಿಗಳ ಸಂರಕ್ಷಣೆ ಸೇವೆಯಲ್ಲಿದ್ದಾಗ ಆನೆ, ಹುಲಿ, ಚಿರತೆ ಹೀಗೆ ಹಲವು ವನ್ಯ ಪ್ರಾಣಿಗಳ ರಕ್ಷಕರಾಗಿ ತಮ್ಮನ್ನು ತೊಡಗಿಸಿಕೊಂಡಿದ್ದರಲ್ಲದೆ ರೈತರ ಜಮೀನುಗಳಿಗೆ ಲಗ್ಗೆ ಇಡುವ ಆನೆಗಳ ದಾಳಿಯನ್ನು ತಡೆಯಲು ಅವುಗಳ ರಕ್ಷಣೆಗೆ ನಿರಂತರವಾಗಿ ಶ್ರಮಿಸಿದ ಶ್ರೇಯಸ್ಸು ಇವರದು. ಇದರಿಂದ ಅರಣ್ಯ ಭಾಗದಲ್ಲಿ ನೆಲೆಸಿದ್ದ ಗ್ರಾಮಗಳ ಜನತೆಯ ಮತ್ತು ಹಿರಿಯ ಅಧಿಕಾರಿಗಳ ಸನ್ಮಾನಕ್ಕೆ ಭಾಜನರಾಗಿದ್ದಾರೆ.

ಉತ್ತರ ಕರ್ನಾಟಕದ ಸಹ್ಯಾದ್ರಿ ಕಪ್ಪತ್ತಗುಡ್ಡವನ್ನು ಇನ್ನಷ್ಟು ಹಸಿರಾಗಿಸುವುದರ ಜೊತೆಗೆ ಜಿಲ್ಲೆಯ ಇನ್ನುಳಿದ ಭಾಗಗಳಲ್ಲಿಯೂ ಸಸಿಗಳನ್ನು ನೆಡಲು ಕಕ್ಕೂರ ನರ್ಸರಿಯಲ್ಲಿ 3 ಲಕ್ಷಕ್ಕೂ ಹೆಚ್ಚು ಗಿಡಗಳನ್ನು ಬೆಳಸಿ ಕಪ್ಪತ್ತಗುಡ್ಡದಲ್ಲಿ, ಸರಕಾರಿ ಸ್ಥಳಗಳಲ್ಲಿ, ರಸ್ತೆ ಬದುಗಳಲ್ಲಿ, ರೈತರ ಜಮೀನುಗಳಲ್ಲಿ ಬೆಳೆಯುವಂತೆ ಮಾಡಿರುವ ಶ್ರೇಯಸ್ಸು ಇವರದಾಗಿದೆ. ಇಲ್ಲಿರುವ ಪ್ರಾಣಿಗಳ ರಕ್ಷಣೆಗೆ ಸಿಬ್ಬಂದಿಗಳ ಜೊತೆಯಲ್ಲಿ ನಿಂತು ಕಪ್ಪತ್ತಗುಡ್ಡ ಭಾಗದಲ್ಲಿ ಬೆಂಕಿ ಬೀಳದಂತೆ ಶ್ರಮಿಸಿದ್ದರಿಂದ ಪರಿಸರವಾದಿಗಳ ಪ್ರಶಂಸೆಗೂ ಪಾತ್ರರಾಗಿದ್ದಾರೆ.

ಔರಾಧ, ಮಡಿಕೇರಿ, ಕಪ್ಪತ್ತಗುಡ್ಡ ಭಾಗದಲ್ಲಿನ ಇವರ ಉತ್ತಮ ಸೇವೆಗೆ ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಭಾಜನರಾಗಿರುವ ವೀರೇಂದ್ರ ಮರಿಬಸಣ್ಣನವರ ಅರಣ್ಯ ಸಂರಕ್ಷಣೆ, ಅಕ್ರಮ ತಡೆಗಟ್ಟುವಿಕೆ, ವನ್ಯಜೀವಿ ಸಂರಕ್ಷಣೆ, ಸಂಶೋಧನೆ, ಅರಣ್ಯ ಪ್ರದೇಶವನ್ನು ಒತ್ತುವರಿದಾರರಿಂದ ತೆರವುಗೊಳಿಸುವುದು, ನೆಡತೋಪು ಬೆಳೆಸುವಂತಹ ಅಭಿವೃದ್ಧಿ ಕಾರ್ಯಗಳು, ಮಾನವ ಪ್ರಾಣಿ ಸಂಘರ್ಷ ಹಾಗೂ ಇತರೆ ನವೀನ ಆಲೋಚನೆಗಳನ್ನು ಕಾರ್ಯಗತಗೊಳಿಸಿದ ಇವರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸನ್ಮಾನಿಸಿದರು.

> ಪರಿಸರ, ವನ್ಯಪ್ರಾಣಿಗಳ ರಕ್ಷಣೆಗೆ ಆದ್ಯತೆ ನೀಡುವವರಿಗೆ ಪ್ರೋತ್ಸಾಹದಾಯಕವಾಗಿ ಮುಖ್ಯಮಂತ್ರಿಗಳ ಪದಕ ಪಡೆದು ಸಾಧನೆ ಮಾಡಿರುವ ವೀರೇಂದ್ರ ಮರಿಬಸಣ್ಣವರ ಅವರ ಪರಿಸರ, ವನ್ಯಪ್ರಾಣಿಗಳ ಬಗೆಗಿನ ಪ್ರೀತಿ, ಸೇವಾಕಾರ್ಯ ಪ್ರಶಂಸನೀಯವಾದದ್ದು.
>
> **– ಡಾ. ತೋಂಟದ ಸಿದ್ದರಾಮ ಶ್ರೀಗಳು.**



> ಪರಿಸರ ರಕ್ಷಕರಾಗಿ ಅರಣ್ಯ ಕಾಯುವ ಎಲ್ಲಾ ಹಂತದ ಸಿಬ್ಬಂದಿಗಳ, ಪರಿಸರವಾದಿಗಳ ಶ್ರಮದಿಂದ ನಾವೆಲ್ಲರೂ ಉತ್ತಮ ಆಮ್ಲಜನಕ, ಉತ್ತಮ ಮಳೆ ಪಡೆಯಲು ಸಾಧ್ಯವಾಗಿದೆ. ಪ್ರತಿಯೊಬ್ಬರೂ ಮುಂದಿನ ಪೀಳಿಗೆಯ ಹಿತಕ್ಕಾಗಿ ಪರಿಸರ ಬೆಳೆಸಲು ಮುಂದಾಗಬೇಕು.
>
> **– ವೀರೇಂದ್ರ ಮರಿಬಸಣ್ಣವರ.**
> ಮುಖ್ಯಮಂತ್ರಿ ಪದಕ ಪಡೆದ ಗದಗ ಜಿಲ್ಲಾ ಪ್ರಭಾರಿ ಎಸಿಎಫ್.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka